MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 247 | ಮಂಗಳವಾರ : 15-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 247 | TUESDAY : 15-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## 11ನೇ ಕೃಷಿ ಗಣತಿ: ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.14**–2021-22ನೇ ಸಾಲಿನ 11ನೇ ಕೃಷಿ ಗಣತಿಯ 2ನೇ ಹಂತದ ಕ್ಷೇತ್ರಕಾರ್ಯ ಪೂರ್ಣಗೊಳಿಸುವ ಸಂಬಂಧ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆಯು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಹೊಸ ಕೃಷಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲು ಮತ್ತು ಅವುಗಳ ಪ್ರಗತಿಯನ್ನು ಮೌಲ್ಯಮಾಪನ ಮಾಡಲು ಅಗತ್ಯವಿರುವ ತಾಲೂಕು ಗ್ರಾಮಮಟ್ಟದ ದತ್ತಾಂಶವನ್ನು ಒದಗಿಸುವುದು ಮತ್ತು ಭವಿಷ್ಯದ ಕೃಷಿ ಸಮೀಕ್ಷೆಗಳನ್ನು ಕೈಗೊಳ್ಳಲು ಸಾಗುವಳಿ ಹಿಡುವಳಿಗಳ ಅಂಕಿ ಅಂಶಗಳ ಚೌಕಟ್ಟನ್ನು ಒದಗಿಸುವುದು ಕೃಷಿ ಗಣತಿಯ ಉದ್ದೇಶವಾಗಿದೆ ಎಂದು ತಿಳಿಸಿದರು.

2024ರ ಆಗಸ್ಟ್ ಮಾಹೆಯಲ್ಲಿ 1ನೇ ಹಂತದ ಕೃಷಿಗಣತಿಯ ಕುರಿತು ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆ ನಡೆಸಿ ವರದಿಯನ್ನು ಅಂತಿಮಗೊಳಿಸಲಾಗಿದೆ. ಪ್ರಸ್ತುತ ರಾಜ್ಯಾದ್ಯಂತ 2021-22ನೇ ಸಾಲಿನ ಮಾಹಿತಿ ಆಧರಿಸಿ 11ನೇ ಕೃಷಿ ಗಣತಿಯ 2ನೇ ಹಂತದ ಗಣತಿ ಕಾರ್ಯವನ್ನು ಪೂರ್ಣಗೊಳಿಸಿದ್ದು, ಅದರಲ್ಲಿ ಸಕಾಲಿಕ ವರದಿ ಯೋಜನೆಗೆ ಆಯ್ಕೆಯಾದ ಗ್ರಾಮಗಳಲ್ಲಿ ಭೂಬಳಕೆ ವಿವರಗಳು, ನೀರಾವರಿಯ ಮೂಲಗಳು, ನೀರಾವರಿಯಾದ ಕ್ಷೇತ್ರ ಮತ್ತು ವಿವಿಧ ಬೆಳೆಗಳ ವಿಸ್ತೀರ್ಣದ ಮಾಹಿತಿಯನ್ನು ಇದೆ ಮೊದಲ ಬಾರಿಗೆ ಮೊಬೈಲ್ ಆಪ್ ಮೂಲಕ ಕ್ಷೇತ್ರ ಕಾರ್ಯಕೈಗೊಳ್ಳಲಾಗಿದೆ. ಈ ಮಾಹಿತಿಯನ್ನು ಸಂಗ್ರಹಿಸಿ ಇಡೀ ತಾಲೂಕಿಗೆ ಹಾಗೂ ಜಿಲ್ಲೆಗೆ ಅನ್ವಯವಾಗುವಂತೆ ಎಸ್ಟಿಮೇಟ್ ವರದಿಯನ್ನು ತಯಾರಿಸಲಾಗುತ್ತದೆ ಎಂದು ತಿಳಿಸಿದರು.

2021-22ನೇ ಸಾಲಿನ 11ನೇ ಕೃಷಿ ಗಣತಿಯ 2ನೇ ಹಂತದ ಕ್ಷೇತ್ರಕಾರ್ಯಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ನಿಗದಿತ ಅವಧಿಯಲ್ಲಿ ದತ್ತಾಂಶ ಪರಿಶೀಲಿಸಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳಿಗೆ ದೃಢೀಕರಣ ಸಲ್ಲಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾಮಟ್ಟದ ಸಮನ್ವಯ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುವ ಜಿಲ್ಲಾ ಸಂಖ್ಯಾ **(2ನೇಪುಟಕ್ಕೆ)**

## ಶಕ್ತಿ ಯೋಜನೆಯಡಿ 500 ಕೋಟಿ ಉಚಿತ ಪ್ರಯಾಣ ಸಾಧನೆ: ಸಿಹಿ ಹಂಚಿ ಸಂಭ್ರಮ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.14**–ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಡಿ 500 ಕೋಟಿ ಉಚಿತ ಪ್ರಯಾಣ ಸಾಧನೆ ಹಿನ್ನೆಲೆಯಲ್ಲಿ ರಾಯಚೂರು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಬಸ್‌ಗಳಿಗೆ ಪೂಜಾ ಹಾಗೂ ಪ್ರಯಾಣಿಕರಿಗೆ ಸಿಹಿ ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದ ಹಿನ್ನೆಲೆಯಲ್ಲಿ ಸಾರಿಗೆ ಬಸ್ಸುಗಳಿಗೆ ಬಣ್ಣಬಣ್ಣದ ರಿಬ್ಬನ್, ತೆಂಗಿನ ಗರಿಗಳನ್ನು ಕಟ್ಟಿ, ಹೂವಿನ ಹಾರಗಳು ಮತ್ತು ಬಲೂನಗಳನ್ನು ಹಾಕಿ ಸಿಂಗರಿಸಲಾಗಿತ್ತು. ಜುಲೈ 14ರಂದು ರಾಜ್ಯಾದ್ಯಂತ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಏಕಕಾಲಕ್ಕೆ ನಡೆದಂತೆ ರಾಯಚೂರ ಕೇಂದ್ರ ಬಸ್ ನಿಲ್ದಾಣದಲ್ಲಿ ಸಹ ಸಾರ್ವಜನಿಕರಿಗೆ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸಿಹಿ ವಿತರಿಸಿ ಸಂಭ್ರಮಿಸಲಾಯಿತು.

ಈ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಸಮಿತಿಯ ಉಪಾಧ್ಯಕ್ಷರಾದ ಹನುಮಂತಪ್ಪ ಜಾಲಿಬೆಂಚಿ, ನಾಗೇಂದ್ರ ಮಠಮಾರಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ಸಾಜೀದ್ ಸಮೀರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ



ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಎಂ.ಎಸ್.ಚಂದ್ರಶೇಖರ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಿ.ಯು.ಹುಡೇದ್, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಂತಸ ವ್ಯಕ್ತಪಡಿಸಿದರು.**(2ನೇಪುಟಕ್ಕೆ)**

## ಮಾನ್ವಿ: ಕೆರೆಯಲ್ಲಿ ಮುಳಗಿ ಯುವಕ ಸಾವು



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.14**– ಕೆರೆಯಲ್ಲಿ ಈಜಲು ಹೋಗಿ ಮುಳುಗಿ ಯುವಕ ಸಾವನ್ನೊಪ್ಪಿದೆ ಘಟನೆ ರಬ್ಬಣಕಲ್ ಗ್ರಾಮದ ಜಯನಗರ ಕ್ಯಾಂಪ್ ಬಳಿ ನಡೆದಿದೆ. ಪಟ್ಟಣದ ಮಹಾತ್ಮಗಾಂಧಿ ನಗರದ ನಿವಾಸಿ ನಾಗರಾಜ ಭೋವಿ (23) ಸಾವೀಗಿಡಾಗಿದ್ದಾನೆ. ತನ್ನ ಸ್ನೇಹಿತರೊಂದಿಗೆ ಪಾರಿವಾಳ ಹಿಡಿಯುವುದಕ್ಕೆ ರಬ್ಬಣಕಲ್ ಗ್ರಾಮಕ್ಕೆ ತೆರಳಿದ್ದ ಪಕ್ಕದಲ್ಲಿಯೇ ಇದ್ದ ಖಾಸಗಿ ಕೆರೆಯಲ್ಲಿ

ಸ್ನಾನ ಮಾಡಲೆಂದು ದುಮುಕಿದ ಕೆಲ ಕ್ಷಣಗಳಲ್ಲೇ ನಾಗರಾಜ್ ನಾಪತ್ತೆಯಾಗಿದ್ದು ಆತನ ಸ್ನೇಹಿತರು ಪಕ್ಕದಲ್ಲೇ ಹೊಲದಲ್ಲಿ ಕೆಲಸ ಮಾಡುತ್ತಿರುವ ಗಮನಕ್ಕೆ ತಂದಿದ್ದು. ತದನಂತರ ಕುಟುಂಬಕ್ಕೆ ಮಾಹಿತಿ ನೀಡಿದ್ದಾರೆ. ಅಗ್ನಿ ಶಾಮಕ ದಳ ಸ್ಥಳಕ್ಕೆ ಆಗಮಿಸಿದ್ದು ಮೃತ ದೇಹಕ್ಕಾಗಿ ಶೋದ ಕಾರ್ಯ ಕೈಗೊಂಡಿದ್ದಾರೆ.

## ರಾಜ್ಯದಲ್ಲಿ 500 ಕೋಟಿ ಮಹಿಳೆಯರಿಂದ ಉಚಿತ ಪ್ರಯಾಣ: ಹಂಪಯ್ಯ ನಾಯಕ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.14**–ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಶಕ್ತಿ ಗ್ಯಾರಂಟಿ ಯೋಜನೆಯಡಿಯಲ್ಲಿ ರಾಜ್ಯದಲ್ಲಿ 500 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಿ ದಾಖಲೆ ನಿರ್ಮಿಸಿರುವುದಕ್ಕೆ ಮಾನ್ವಿ ಪಟ್ಟಣದ ಬಸ್ ನಿಲ್ದಾಣದಲ್ಲಿ ಶಾಸಕ ಹಂಪಯ್ಯನಾಯಕ ಅವರು ಮಹಿಳೆಯರಿಗೆ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಹಂಪಯ್ಯನಾಯಕ, ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರವು ಚುನಾವಣೆಯಲ್ಲಿ ನೀಡಿದ ಭರವಸೆಯಂತೆ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ. ಇದರಿಂದ ರಾಜ್ಯದ ಸ್ತ್ರೀಯರು ಸ್ವಾವಲಂಬಿಗಳಾಗಿ ಬದುಕುವ ಆಶಯ ಈಡೇರಿದೆ. ರಾಜ್ಯದಲ್ಲಿ ಇಲ್ಲಿಯವರೆಗೆ 500 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣಿಸುವ



ಮೂಲಕ ದಾಖಲೆ ಬರೆದಿದ್ದಾರೆ. ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮಿ, ಯುವ ನಿಧಿ ಯೋಜನೆಗಳ ಲಾಭವನ್ನು ಕೂಡ ಫಲಾನುಭವಿಗಳು ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ನಮ್ಮ ಸರ್ಕಾರ ಬಡವರ ಮತ್ತು ದಿನ ದಲಿತರ ಪರವಾಗಿದೆ. ಕೇಂದ್ರ ಸರ್ಕಾರವು ಕಾಂಗ್ರೆಸ್ ನೇತೃತ್ವದ ಸರ್ಕಾರವನ್ನು ಪತನಗೊಳಿಸುವ ಉದ್ದೇಶದಿಂದ ಆರ್ಥಿಕವಾಗಿ ದುರ್ಬಲಗೊಳಿಸಲು, ಅಸ್ಥಿರಗೊಳಿಸಲು ರಾಜ್ಯದಲ್ಲಿ ಸಂಗ್ರಹವಾಗುವ ತೆರಿಗೆಯಲ್ಲಿ ನಮಗೆ ಬರಬೇಕಾದ ನ್ಯಾಯಯುತ ಪಾಲನ್ನು ನೀಡುತ್ತಿಲ್ಲ. ನಮ್ಮ ಪಾಲನ್ನು ಪಡೆಯಲು ರಾಜ್ಯ ಸರ್ಕಾರ ನಿರಂತರವಾಗಿ ಕೇಂದ್ರ ಸರ್ಕಾರದೊಂದಿಗೆ ಹೋರಾಟ ಮಾಡಬೇಕಾಗಿದೆ ಎಂದರು.**(2ನೇಪುಟಕ್ಕೆ)**

## ಶಕ್ತಿ ಯೋಜನೆ : ಕಾಂಗ್ರೆಸ್ ಕಾರ್ಯಕರ್ತರ ಸಂಭ್ರಮ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.14**– ರಾಜ್ಯ ಸರಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಸ್ಥಳೀಯ ಬಸ್‌ನಿಲ್ದಾಣದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆ ಮಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗೋವಿಂದ ನಾಯಕರ ನೇತೃತ್ವದಲ್ಲಿ ಮಹಿಳಾ ಪ್ರಯಾಣಿಕರಿಗೆ, ಮಹಿಳಾ ಸಿಬ್ಬಂಧಿಗಳಿಗೆ ಸಿಹಿ ಹಂಚಿದರು. ಈ ಸಂದರ್ಭದಲ್ಲಿ ಮಾತನಾಡಿದ ಘಟಕ ವ್ಯವಸ್ಥಾಪಕ ಪ್ರಕಾಶ ದೊಡ್ಡಮನಿ, ತಾಲೂಕಿನಲ್ಲಿ 72.90 ಕೋ ಟಿ ರೂಪಾಯಿ ವೆಚ್ಚದಲ್ಲಿ 1.87 ಲಕ್ಷ ಮಹಿಳಾ ಪ್ರಯಾಣಕರು ಪ್ರಯಾಣಸಿದ್ದಾರೆ. ಇದರಿಂದ ಘಟಕಕ್ಕೆ ಪ್ರತಿದಿನ 9.56 ಲಕ್ಷ ರೂಪಾಯಿ ಆದಾಯ ಬರುತ್ತಿದೆ. ಈ



ಯೋಜನೆ ಅನುಷ್ಠಾನಕ್ಕೂ ಮುನ್ನ 569 ಟ್ರಿಪ್‌ಗಳಿದ್ದು, ಈಗ 703ಕ್ಕೆ ಹೆಚ್ಚಿಸಲಾಗಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಅಮರೇಶ ಹೆಸರೂರು,ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ವೆಂಕಟೇಶ ಗುತ್ತೇದಾರ, ಮುಖಂಡರಾದ ಮಹ್ಮದ್ ಹಾಜಿಬಾಬಾ ಕರಡಕಲ್, ಮಹ್ಮದ್ ರಫಿ, ಸಂಜೀವಪ್ಪ, ಕುಪ್ಪಣ್ಣ ಕೊಡ್ಲಿ, ಶ್ವೇತಾ, ಲಕ್ಷ್ಮಿ ಬಾಯಿ, ಶಾಂತ ಹಣಗಿ, ಉಮೇಶ ಹುನಕುಂಟಿ, ಗದ್ದೆನಗೌಡ, ಅಲ್ಲಾವುದ್ದೀನ್, ಅಸ್ಲಂಪಾಷಾ, ಶ್ರೀನಿವಾಸ, ಶರಣಪ್ಪ ಸೇರಿ ಇತರರು ಇದ್ದರು.

### ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ನವೀಕೃತ ಕಟ್ಟಡ ಉದ್ಘಾಟನೆ

## 'ಮಂತ್ರಾಲಯ ರಾಯರ ಮಠಕ್ಕೂ ಮಾನ್ವಿಗೂ ಅವಿನಾಭಾವ ಸಂಬಂಧವಿದೆ'

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.14**– ಪಟ್ಟಣದಲ್ಲಿರುವ ಶ್ರೀರಾಘವೇಂದ್ರ ಸ್ವಾಮಿಗಳ ಮಠದ ನವೀಕೃತ ಕಟ್ಟಡ ಮತ್ತು ನೂತನ ವಸತಿಗೃಹಗಳನ್ನು ಭಾನುವಾರ ಸಂಜೆ ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಶ್ರೀ ಸುಬುಧೇಂದ್ರ ತೀರ್ಥ ಶ್ರೀ ಪಾದಂಗಳವರು ಉದ್ಘಾಟಿಸಿದರು.

ಶ್ರೀ ಸುಬುಧೇಂದ್ರ ತೀರ್ಥ ಶ್ರೀ ಪಾದಂಗಳವರು ಮಾತನಾಡಿ, ಮಂತ್ರಾಲಯ ಕ್ಷೇತ್ರವು ಇಂದು ಭಕ್ತರ ಸೇವೆಯಿಂದ ವಿಶ್ವದ ಪ್ರಮುಖ ಪ್ರೇಕ್ಷಣೀಯ, ಸಾಂಸ್ಕೃತಿಕ, ಧಾರ್ಮಿಕ ಕ್ಷೇತ್ರವಾಗಿ ರೂಪುಗೊಂಡಿದೆ. ಅದೇ ರೀತಿ ಮಾನ್ವಿ ಪಟ್ಟಣದಲ್ಲಿನ ರಾಘವೇಂದ್ರ ಮಠವೂ ಕೂಡ ರೂಪಗೊಂಡಿದೆ ಎಂದು ತಿಳಿಸಿದರು. ಮಂತ್ರಾಲಯ ರಾಯರ ಮಠಕ್ಕೂ ಮಾನ್ವಿಗೂ ಅವಿನಾಭಾವ ಸಂಬಂಧವಿದೆ ಎಂಬುದನ್ನು ಅವರು ಒತ್ತಿ ಹೇಳಿದರು. ಶ್ರೀರಾಘವೇಂದ್ರ ಸ್ವಾಮಿಗಳು ಮಂತ್ರಾಲಯಕ್ಕೆ ಆಗಮಿಸಿ ವೃಂದಾವನ ಪ್ರವೇಶಿಸುವ ಮುನ್ನ ಮಾನ್ವಿ ಪಟ್ಟಣದಲ್ಲಿ ತಮ್ಮ ಚಾತುರ್ಮಾಸ ವ್ರತವನ್ನು ಪೂರೈಸಿದ್ದರು. ಆ ಸಮಯದಲ್ಲಿ ಕಡುಬಡವ ಭಕ್ತನೊಬ್ಬ ಭಕ್ತಿಪೂರ್ವಕವಾಗಿ ನೀಡಿದ ಸಾಸಿವೆಯನ್ನು ಸ್ವೀಕರಿಸಿದ ನಂತರವೇ ಮಠದ ಅಡುಗೆಯಲ್ಲಿ ಸಾಸಿವೆಯ ಬಳಕೆ ಪ್ರಾರಂಭವಾಯಿತು ಎಂಬುದನ್ನು ಅವರು ಸ್ಮರಿಸಿದರು.

ಭಕ್ತರಿಂದ 'ನಾಡಾಡುವ ರಾಯರು' ಎಂದು ಕರೆಯಲ್ಪಡುತ್ತಿದ್ದ ಗುರುಗಳಾದ ಸುಶಮೀಂದ್ರತೀರ್ಥ ಶ್ರೀಪಾದಂಗಳವರ ಅಮೃತ ಹಸ್ತದಿಂದ ಮಾನ್ವಿಯಲ್ಲಿ ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಮೂಲ ಮೃತ್ತಿಕಾ ವೃಂದಾವನಕ್ಕೆ ಶಂಕುಸ್ಥಾಪನೆ ನೆರವೇರಿ ಮಠ ನಿರ್ಮಾಣಗೊಂಡಿತು. ಈಗ ಭಕ್ತರ ಅನುಕೂಲಕ್ಕಾಗಿ ಶ್ರೀಮಠವು ಸುಂದರವಾಗಿ ನವೀಕರಣಗೊಂಡಿದೆ. ಹಿರಿಯ ಗುರುಗಳ ಸಂಕಲ್ಪದಂತೆ ಮಠದ ಆವರಣದಲ್ಲಿ ಭವ್ಯವಾದ ಮಂಗಲ ಕಾರ್ಯಗಳಿಗಾಗಿ ಕಲ್ಯಾಣ ಮಂಟಪ ನಿರ್ಮಾಣಕ್ಕೆ ಭಕ್ತರೊಂದಿಗೆ ಮಂತ್ರಾಲಯ ಮಠದಿಂದಲೂ ಅಗತ್ಯ ನೆರವು ನೀಡುವುದಾಗಿ ಶ್ರೀ ಸುಬುಧೇಂದ್ರ ತೀರ್ಥರು ಭರವಸೆ ನೀಡಿದರು.

ಶ್ರೀಪುರಂದರದಾಸರ ನಂತರ ರಾಯಚೂರು ಜಿಲ್ಲೆಯು ದಾಸರ**(2ನೇಪುಟಕ್ಕೆ)**



## ಮೊದಲನೇಯ ಪುಟದಿಂದ

# ಶಕ್ತಿ ಯೋಜನೆಯಡಿ 500 ಕೋಟಿ ಉಚಿತ ಪ್ರಯಾಣ ಸಾಧನೆ: ಸಿಹಿ ಹಂಚಿ ಸಂಭ್ರಮ

ಈ ಸಂದರ್ಭದಲ್ಲಿ ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಮಾತನಾಡಿ, ರಾಜ್ಯ ಸರ್ಕಾರವು ಹಿಂದುಳಿದ, ಅಲ್ಪಸಂಖ್ಯಾತರ, ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯ ಸೇರಿದಂತೆ ಅನೇಕ ಹಿಂದುಳಿದ ಸಮುದಾಯಗಳನ್ನು ಗಮನದಲ್ಲಿಟ್ಟುಕೊಂಡು ಅನೇಕ ಯೋಜನೆಗಳನ್ನು ಜಾರಿ ಮಾಡಿ ಅನುಷ್ಠಾನ ಮಾಡುತ್ತಿದೆ. ವಿಶೇಷವಾಗಿ ಕೌಟುಂಬಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುವ ಮಹಿಳೆಯರನ್ನು ಗಮನದಲ್ಲಿಟ್ಟುಕೊಂಡು ಗೃಹಲಕ್ಷ್ಮಿ ಯೋಜನೆ ಸೇರಿದಂತೆ ರಾಜ್ಯ ಸರ್ಕಾರವು ಶಕ್ತಿ ಯೋಜನೆಗಳನ್ನು ಜಾರಿ ಮಾಡಿದೆ. ಈ ಯೋಜನೆಗಳಿಂದ ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ. ಸಾರಿಗೆ ಬಸ್ಸುಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕಾಗಿ ರಾಯಚೂರ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಇದುವರೆಗೆ 12,669 ಕೋಟಿ ರೂ. ವಿ ನಿಯೋಗಿಸಿರುವುದು ದಾಖಲಾರ್ಹ ಸಾಧನೆಯಾಗಿದೆ ಎಂದು ಅವರು ತಿಳಿಸಿದರು.

ರಾಯಚೂರ ಜಿಲ್ಲೆಯಲ್ಲಿ ಇದುವರೆಗೆ ದಾಖಲೆಯ ಪ್ರಮಾಣದಲ್ಲಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಸರಾಸರಿ ಪ್ರತಿ ನಿತ್ಯ 1.16 ಲಕ್ಷ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ ಸಾರಿಗೆ ಆದಾಯ 353.23 ಕೋಟಿ ರೂ. ಆಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಾರಿಗೆ ಇಲಾಖೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ, ವಾಹನ ಚಾಲಕರು, ನಿರ್ವಾಹಕರು, ಸಾರ್ವಜನಿಕರು ಇದ್ದರು.

# 'ಮಂತ್ರಾಲಯ ರಾಯರ ಮಠಕ್ಕೂ ಮಾನ್ವಿಗೂ ಅವಿನಾಭಾವ ಸಂಬಂಧವಿದೆ'

ನೆಲವೀಡಾಗಿದೆ ಎಂದು ಶ್ರೀ ಪಾದಂಗಳವರು ವಿವರಿಸಿದರು. ಹರಿಕಾಥಾಮೃತ ಸಾರದಂತಹ ಶ್ರೇಷ್ಠ ಕೃತಿಯನ್ನು ಕನ್ನಡದಲ್ಲಿ ವಿಶ್ವಕ್ಕೆ ನೀಡಿದ್ದು ಮಾನ್ವಿಯ ಜಗನ್ನಾಥದಾಸರು. ಜಿಲ್ಲೆಯಲ್ಲಿ ಗೋಪಾಲದಾಸರು, ಪ್ರಾಣೇಶದಾಸರು ಮತ್ತು ಅವರ ಶಿಷ್ಯರು ಸೇರಿದಂತೆ ರಾಜ್ಯದ ಶೇ 60ರಷ್ಟು ದಾಸರು ನೆಲೆಸಿದ್ದಾರೆ. ದಾಸ ಪರಂಪರೆಯನ್ನು ಮತ್ತು ದಾಸರ ಸನ್ನಿಧಾನಗಳನ್ನು ಅಭಿವೃದ್ಧಿಪಡಿಸುವ ಸಲುವಾಗಿ, ಮಂತ್ರಾಲಯ ಮಠದ ರಾಯರ ಸಂಕಲ್ಪದಿಂದ ಮಾನ್ವಿಯ ಜಗನ್ನಾಥದಾಸರ ಸಾನ್ನಿಧ್ಯ ಮಂದಿರ ಮತ್ತು ಚೀಕಲಪರ್ವಿಯ ಶ್ರೀ ವಿಜಯದಾಸರ ಕಟ್ಟೆಯ ಸನ್ನಿಧಾನವನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಮಾನ್ವಿಯಲ್ಲಿ ವರ್ಷಕ್ಕೊಮ್ಮೆ ಮಠದ ವತಿಯಿಂದ ದಾಸ ಸಾಹಿತ್ಯ ಕುರಿತು ಸಮ್ಮೇಳನವನ್ನು ಹಮ್ಮಿಕೊಳ್ಳುವ ಮೂಲಕ ಜಿಲ್ಲೆಯ ಎಲ್ಲಾ ದಾಸರ ಹಿರಿಮೆ ಮತ್ತು ಕೃತಿಗಳನ್ನು ವಿಶ್ವಕ್ಕೆ ಪರಿಚಯಿಸುವ ಕಾರ್ಯವನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇದಕ್ಕೂ ಮುನ್ನ, ಪಟ್ಟಣದ ಶ್ರೀ ಜಗನ್ನಾಥ ದಾಸರ ಮಂದಿರದಿಂದ ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಶ್ರೀ ಸುಬುಧೇಂದ್ರ ತೀರ್ಥ ಶ್ರೀ ಪಾದಂಗಳವರನ್ನು ವಿವಿಧ ಭಜನಾ ಮಂಡಳಿಯವರು ಮತ್ತು ನೂರಾರು ಭಕ್ತರು ಭವ್ಯ ಶೋಭಾಯಾತ್ರೆಯ ಮೂಲಕ ಶ್ರೀ ರಾಘವೇಂದ್ರ ಸ್ವಾಮಿಗಳ ಮಠಕ್ಕೆ ಕರೆತಂದರು. ಸೋಮವಾರ ಬೆಳಿಗ್ಗೆ ಶ್ರೀ ರಾಘವೇಂದ್ರ ಸ್ವಾಮಿಗಳ ಮೂಲ ಮೃತ್ತಿಕಾ ವೃಂದಾವನ ಸನ್ನಿಧಾನದಲ್ಲಿ ಶ್ರೀ ಸುಬುಧೇಂದ್ರ ತೀರ್ಥ ಶ್ರೀ ಪಾದಂಗಳವರು ಬ್ರಹ್ಮಕರಾರ್ಚಿತ ಮೂಲರಾಮದೇವರ ಸಂಸ್ಥಾನ ಪೂಜೆಯನ್ನು ನೆರವೇರಿಸಿ ಭಕ್ತರಿಗೆ ಫಲ ಮಂತ್ರಾಕ್ಷತೆಯನ್ನು ನೀಡಿ ಅನುಗ್ರಹಿಸಿದರು.

ಶ್ರೀ ಮಠದ ಗೌರವ ವಿಚಾರಣಾಕರ್ತರಾದ ಮುದ್ದು ರಂಗರಾವ್ ಮುತಾಲಿಕ್, ಕಟ್ಟಡ ನಿರ್ಮಾಣ ಸಮಿತಿಯ ಪದಾಧಿಕಾರಿಗಳು, ಪಟ್ಟಣದ ವಿಪ್ರ ಬಾಂಧವರು ಮತ್ತು ಆರ್ಯವೈಶ್ಯ ಸಮುದಾಯದವರು ಸೇರಿದಂತೆ ಸಾವಿರಾರು ಭಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ರಾಜ್ಯದಲ್ಲಿ 500 ಕೋಟಿ ಮಹಿಳೆಯರಿಂದ ಉಚಿತ ಪ್ರಯಾಣ: ಹಂಪಯ್ಯ ನಾಯಕ

ರಾಜ್ಯದಲ್ಲಿ ಆಡಳಿತ ನಡೆಸಿದ ಬಿಜೆಪಿ ಮತ್ತು ಜೆಡಿಎಸ್ ಸರ್ಕಾರಗಳಿಂದ ಬಡವರ ಪರವಾದ ಯೋಜನೆಗಳನ್ನು ಜಾರಿಗೆ ತರಲು ಏಕೆ ಸಾಧ್ಯವಾಗಿಲ್ಲ ಎಂದು ಪ್ರಶ್ನಿಸಿದ ಶಾಸಕರು, ನಮ್ಮ ಸರ್ಕಾರ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿ ಮಾಡಿದ್ದರೂ ಆರ್ಥಿಕವಾಗಿ ದಿವಾಳಿಯಾಗಿಲ್ಲ, ಬದಲಿಗೆ ಆರ್ಥಿಕವಾಗಿ ಸದೃಢವಾಗಿದೆ ಎಂದು ಹೇಳಿದರು.

ಮಾನ್ವಿ ತಾಲ್ಲೂಕಿನಲ್ಲಿ 71.96 ಲಕ್ಷ ಮಹಿಳೆಯರು ಶಕ್ತಿ ಯೋಜನೆಯಡಿಯಲ್ಲಿ ಉಚಿತವಾಗಿ ಪ್ರಯಾಣ ಮಾಡಿದ್ದು, ಮಾನ್ವಿ ಸಾರಿಗೆ ಘಟಕಕ್ಕೆ 24 ಕೋಟಿ 31 ಲಕ್ಷ ಆದಾಯ ಬಂದಿದೆ ಎಂದು ಹಂಪಯ್ಯನಾಯಕ ಮಾಹಿತಿ ನೀಡಿದರು.

ತಾಲ್ಲೂಕು ಪಂಚ ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಬಿ.ಕೆ. ಅಂಬರೇಶಪ್ಪ ಮಾತನಾಡಿ, ತಾಲ್ಲೂಕಿನ ಫಲಾನುಭವಿಗಳಿಗೆ ರಾಜ್ಯ ಸರ್ಕಾರದ ಎಲ್ಲಾ ಐದು ಗ್ಯಾರಂಟಿಗಳು ತಲುಪುವಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷರಾದ ಲಕ್ಷ್ಮೀ ವೀರೇಶ್.ಡಿ, ಮಾನ್ವಿ ಸಾರಿಗೆ ಘಟಕದ ವ್ಯವಸ್ಥಾಪಕರಾದ ನಾಗರಾಜ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಬ್, ತಾಲ್ಲೂಕು ಪಂಚ ಗ್ಯಾರಂಟಿ ಸಮಿತಿಯ ಸದಸ್ಯರಾದ ಗುಂಡಮ್ಮ, ಹಿರಿಯ ಪುರಸಭೆ ಸದಸ್ಯರಾದ ಲಕ್ಷ್ಮೀದೇವಿ ನಾಯಕ, ರಾಜಾ ಸುಭಾಷಚಂದ್ರನಾಯಕ, ಶಿವರಾಜ ನಾಯಕ, ಸೈಯಾದ್ ಖಾಲೀದ್ ಖಾದ್ರಿ, ಜಯಪ್ರಕಾಶ, ಪುರಸಭೆ ಸದಸ್ಯರಾದ ರೇವಣಸಿದ್ದಯ್ಯಸ್ವಾಮಿ, ವೆಂಕಟೇಶನಾಯಕ, ಹೆಚ್.ಬಿ.ಎ.ಎಂ.ಬಾಷಾ, ಸಾಬೀರ್ ಹುಸೇನ್, ಜಿಲಾನಿ ಖುರೇಶಿ, ಬಸವರಾಜ್ ಭಜಂತ್ರಿ, ಸುಖಮುನಿ, ಕನಕಪ್ಪ ಯಾದವ್, ಮಹಾಬಲೇಶ್ವರಪ್ಪ ಗೌಡ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 11ನೇ ಕೃಷಿ ಗಣತಿ: ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆ

ಸಂಗ್ರಹಣಾಧಿಕಾರಿಗಳಾದ ಡಾ.ತಿಪ್ಪಣ್ಣ ಅವರು, ಕೃಷಿ ಗಣತಿಯ ಹಿನ್ನೆಲೆ, ಕೃಷಿ ಗಣತಿಯ ವಿಧಾನ, 11ನೇ ಕೃಷಿ ಗಣತಿಯ 1ನೇ ಹಂತದ ಕಾರ್ಯಕ್ಷೇತ್ರದ ಬಗ್ಗೆ ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕರು, ಭೂ ದಾಖಲೆಗಳ ಉಪ ನಿರ್ದೇಶಕರು, ಜಿಲ್ಲಾ ಎನ್ಐಸಿ ಅಧಿಕಾರಿ, ಸಹಾಯಕ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಶರಣಪ್ಪ, ವಿವಿಧ ವಿಷಯಗಳ ವಿಷಯ ನಿರ್ವಾಹಕರು ಇದ್ದರು.

# ರೈತರಿಗೆ ವರದಾನವಾದ ನರೇಗಾ ಯೋಜನೆಯಡಿ ನಿರ್ಮಿಸಿದ ನಾಲಾ ಸೇತುವೆ

**ಬೀದರ:ಜು.14**–ಬರೂರು ಗ್ರಾಮದಲ್ಲಿ ನರೇಗಾದಿಂದ ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಪ್ರತಿ ಕಿಲೋಮೀಟರ್ ರಸ್ತೆಗೆ 3 ಲಕ್ಷದವರೆಗೆ ಅನುದಾನ ಬಳಸಿಕೊಳ್ಳಲು ಅವಕಾಶವಿದ್ದು ಅದರಂತೆ ಸುಮಾರು 1.5 ಕಿ. ಮಿ ರಸ್ತೆ ನಿರ್ಮಾಣದ ಜೊತೆಗೆ 1.5–2 ಲಕ್ಷ ಅನುದಾನದಲ್ಲಿ 3 ನಾಲಾ ಸೇತುವೆ ನಿರ್ಮಾಣ ಮಾಡಿದ್ದು ರೈತರಿಗೆ ವರದಾನವಾಗಿ ಪರಿಣಮಿಸಿದೆ.

ರಸ್ತೆ ನಿರ್ಮಾಣದಿಂದ ರೈತರಿಗೆ ದಿನನಿತ್ಯ ತಮ್ಮ ಜಮೀನುಗಳಿಗೆ ತೆರಳಲು ಹಾಗೂ ರಾಶಿ ಸಂದರ್ಭದಲ್ಲಿ ವಾಹನಗಳ ಮೂಲಕ ಅನಾಜು ಸಾಗಾಟ ಮಾಡಲು ಅನುಕೂಲವಾಗಲಿದೆ. ಜೊತೆಗೆ ಈ ರಸ್ತೆಯು ಹೆದ್ದಾರಿಗೆ ಹೊಂದಿಕೊಂಡಿದ್ದರಿಂದ ಇನ್ನು ಹೆಚ್ಚಿನ ಸಹಕಾರಿಯಾಗಲಿದೆ.

ಈ ರಸ್ತೆಗಳ ಕೆಳಗಡೆ ನಾಲಾ ಸೇತುವೆ ನಿರ್ಮಾಣ ಮಾಡಿದ್ದರಿಂದ ಮಳೆಗಾಲದಲ್ಲಿ ನೀರು ಜಮೀನಿಗೆ ನುಗ್ಗದೆ ಈ



ನಾಳದ ಮೂಲಕ ಸಲೀಸಾಗಿ ಹರಿದು ಹೋಗೋತ್ತವೆ. ಇದರಿಂದ ಬೆಳೆ ಹಾನಿ ತಪ್ಪಲಿದೆ. ಜೊತೆಗೆ ರಸ್ತೆಯ ಬದಿಯಲ್ಲಿ ಕಾಲುವೆ ರೂಪದಲ್ಲಿ ಕಂದಕ ನಿರ್ಮಾಣ ಮಾಡಿದ್ದು ಇದು ಹೊಲಗಳಿಗೆ ನುಗ್ಗುವ ಸಂಪೂರ್ಣ ನೀರನ್ನು ತಡೆಯುತ್ತದೆ.

# ಸಾಹಿತ್ಯಕ್ಕೆ ಸುಬ್ರಾವ್ ಕುಲಕರ್ಣಿ ಕೊಡುಗೆ ಅಪಾರ: ಕೊನೇಕ

**ಕಲಬುರಗಿ:ಜು.14**– ಕನ್ನಡ ಸಾಹಿತ್ಯದ ಕಥೆ,ಪ್ರವಾಸ,ನಾಟಕ, ಪ್ರಬಂಧ ಮೊದಲಾದ ಕ್ಷೇತ್ರಗಳಲ್ಲಿ ಬರವಣಿಗೆಯ ಜೊತೆಗೆ ಆತ್ಮೀಯ ಸಂಬಂಧ ಬೆಸೆಯುವ ಬದುಕು– ಬರಹ ಹೊಂದಾಗಿಸಿಕೊಂಡ ಅಪರೂಪದ ಸಾಹಿತಿ ಸಾಹಿತ್ಯಕ್ಕೆ ಅಪಾರ ಕೊಡುಗೆ ಸುಬ್ರಾವ್ ಕುಲಕರ್ಣಿ ನೀಡಿದ್ದಾರೆಂದು ಸಿದ್ಧಲಿಂಗೇಶ್ವರ ಪ್ರಕಾಶನದ ಪ್ರಕಾಶಕ ಡಾ.ಬಸವರಾಜ ಕೊನೇಕ ಅಭಿಮತ ವ್ಯಕ್ತಪಡಿಸಿದರು.

ಸಿರಿಗನ್ನಡ ವೇದಿಕೆ ಜಿಲ್ಲಾ ಘಟಕ ಮತ್ತು ಸಾಕ್ಷಿ ಪ್ರತಿಷ್ಠಾನ ಆಶ್ರಯದಲ್ಲಿ ಅಕ್ಷಯ ನಿವಾಸದಲ್ಲಿ ಸಾಹಿತ್ಯ ಸಮಾಗಮದ ಮಾಲಿಕೆ ಉದ್ಘಾಟಿಸಿ ಮಾತನಾಡಿ, ನಮ್ಮ ಪ್ರದೇಶದ ಲೇಖಕರ ಕೃತಿಗಳ ಪ್ರಕಟಣೆ ಆಗಬೇಕು,ವಿಮರ್ಶೆ ಆಗಬೇಕು ಇಂತಹ ಮಾಲಿಕೆ ಆ ಕೆಲಸ ನೀಗಿಸಲಿ ಎಂದರು. ನಾಟಕ ಮತ್ತು ಪ್ರಬಂಧ ಕುರಿತು ಪ್ರಾಧ್ಯಾಪಕ ಡಾ.ನಾರಾಯಣ ರೋಳೇಕರ್ ಮಾತನಾಡಿ ಲೇಖಕರು ಸ್ವಯಂ ಅನುಭವದ ಮೂಲಕ ನಾಟಕ ರಚಿಸಿ ಹೃದಯ ಪರಿ ವರ್ತನೆಗೆ ಕಾರಣವಾಗಿದೆ.ಪ್ರಬಂಧದ ಹಾಸ್ಯ, ವಿಷಯ ಶೈಲಿಯ ಮೂಲಕ ಗಮನ ಸೆಳೆವ ಸೃಜನಶೀಲ ಬರಹಗಾರರು ಎಂದರು.

ಸಾಹಿತಿ ವೆಂಕಟೇಶ ಜನಾದ್ರಿಯವರು ಕಥಾ ಸಾಹಿತ್ಯದಲ್ಲಿಪ್ರೀತಿ,ರಸಿಕತೆ,ಮಾನವೀಯತೆ, ಮನುಷ್ಯ ಸಂಬಂಧದ ಆದರ್ಶ ಮೌಲ್ಯವನ್ನು ಪ್ರತಿಪಾದಿಸಿದ ಅದ್ಭುತ ಕಥೆಗಾರ ಎಂದರು. ಅಧ್ಯಕ್ಷತೆಯನ್ನು ಜಿಲ್ಲಾಧ್ಯಕ್ಷ ಡಾ.ಗವಿಸಿದ್ಧಪ್ಪ ಪಾಟೀಲ ವಹಿಸಿ ಸುಬ್ರಾವರು ಬಹುಮುಖ ಪ್ರತಿಭೆ. ಕಥೆ,ಪ್ರವಾಸ, ಪ್ರಬಂಧ,



ನಾಟಕ,ಸೃಜನಶೀಲ ಸಾಹಿತ್ಯ ರಚನೆಯ ಜೊತೆಗೆ ಅವರೊಬ್ಬ ರಂಗ ಕಲಾವಿದರಾಗಿ ಪ್ರಸಿದ್ಧರು.ಅವರ ಸಾಹಿ ತ್ಯ ಮನುಷ್ಯ ಸಂಬಂಧ ಬೆಸೆಯುವುದಾಗಿದೆ ಎಂದರು.

ಡಾ.ಶೋಭಾದೇವಿ ಚಕ್ಕಿ ಮತ್ತು ಸಿ.ಎಸ್.ಮಾಲಿಪಾಟೀಲ ಪ್ರಾರ್ಥನೆಗೀತೆ ಹಾಡಿದರು.ಡಾ.ಸಿದ್ಧಪ್ಪ ಹೊಸಮನಿಸ್ವಾಗತಿಸಿದರು. ಡಾ.ಜಯದೇವಿ ಗಾಯಕವಾಡ ಪ್ರಾಸ್ತಾವಿಕ ನುಡಿ ದರು.ಡಾ. ರಾಜಕುಮಾರ ಮಾಳಗೆ ನಿರೂಪಿಸಿದರು ಡಾ.ಕೈಲಾಸ ಡೋಣಿ ವಂದಿಸಿದರು. ಪ್ರಭಾಕರ ಜೋಶಿ, ಪ.ಮನು ಸಗರ,ರಾಜೇಂದ್ರ ಜಳಕಿ,ಡಾ.ಶೀಲಾದೇವಿ ಬಿರಾದಾರ,ಡಾ. ಮಲ್ಲಿನಾಥ ನಿಂಬರ್ಗಿ,ಭಾಗ್ಯಶ್ರೀ ನರಗುಂದ,ಡಾ.ಕೈಲಾಸ ಡೋಣಿ,ಡಾ.ಶರಣಬಸಪ್ಪ ವಡ್ಡನಕೇರಿ,ಆಕಾಶ ತೆಗನೂರ,ಶಾಮರಾವ್ ಪ್ರಭು,ಶರಣಬಸ ಪ್ಪ ಸೂಗೂರು,ಡಾ.ಶಿವಪುತ್ರ ಹೊಳ್ಕರ್, ಇತರರು ಇದ್ದರು

# ಚಿನ್ನದಂಗಡಿ ದರೋಡೆಗೆ ಸುಪಾರಿ ಕೊಟ್ಟೋನು ನಾಪತ್ತೆ!ದರೋಡೆಕೋರರ ಸುಳಿವು ಪತ್ತೆ; ಇಬ್ಬರು ಅಂದರ್

**ಕಲಬುರಗಿ,ಜು.14**– ಇಂಥದ್ದೇ ಚಿನ್ನದಂಗಡಿಯಲ್ಲಿ ದರೋಡೆ ನಡೆಸುವಂತೆ ಸುಪಾರಿ ನೀಡಿದ್ದ ಪಶ್ಚಿಮ ಬಂಗಾಳ ಮೂಲದ ವ್ಯಕ್ತಿಯ ಬೆನ್ನು ಬಿದ್ದಿರುವ ಪೊಲೀಸರು ಇದೀಗ ಮುಂಬೈ ನಗರದಲ್ಲಿ ಅವಿತು ಕುಳಿತಿರುವ ದರೋಡೆಕೋರರ ಸುಳಿವು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

ಚಿನ್ನಾಭರಣ ಅಂಗಡಿ ಮಾಲೀಕನ ಹಣೆಗೆ ಗನ್ ಹಿಡಿದು ಬೆದರಿಕೆ ಹಾಕಿದ್ದಲ್ಲದೆ, ಆತನ ಕೈಕಾಲು ಕಟ್ಟಿಹಾಕಿ ಚಿನ್ನಾಭರಣ ದೋಚಿದ್ದ ದರೋಡೆಕೋರರ ಬೆನ್ನು ಹತ್ತಿರುವ ಕಲಬುರಗಿ ಪೊಲೀಸರು ಈಗಾಗಲೇ ಮುಂಬೈ ತಲುಪಿದ್ದಾರೆ. ಈ ಮಧ್ಯೆ, ಕಳ್ಳರು ಎಲ್ಲಿ ಅವಿತು ಕುಳಿತಿದ್ದಾರೆ ಎಂಬುದರ ಸುಳಿವು ಸಹ ಪೊಲೀಸರಿಗೆ ಲಭಿಸಿದೆಯಾದರೂ, ದರೋಡೆಕೋರರ ಬಳಿ ಗನ್ ಇರುವ ಕಾರಣಕ್ಕಾಗಿ ಪಕ್ಕಾ ಯೋಜನೆ ರೂಪಿಸಿಯೇ ದರೋಡೆಕೋರರನ್ನು ಹೆಡೆಮುರಿ ಕಟ್ಟಿ ಕಲಬುರಗಿಗೆ ತರಲು ಶೋಧ ತಂಡದ ಪೊಲೀಸರು ಕಾರ್ಯತಂತ್ರ ರೂಪಿಸುತ್ತಿದ್ದಾರೆ ಎಂದು ಪೊಲೀಸ್ ಇಲಾಖೆಯ ಉನ್ನತ ಮೂಲಗಳು ತಿಳಿಸಿವೆ.

ಈ ಮಧ್ಯೆ, ಕಲಬುರಗಿಯ ಸರಾಫ್ ಬಜಾರ್ ಪ್ರದೇಶದಲ್ಲಿರುವ ಇಂಥದ್ದೇ ಚಿನ್ನಾಭರಣದ ಅಂಗಡಿಗೆ ನುಗ್ಗಿ ದರೋಡೆ ಮಾಡುವಂತೆ ಸುಪಾರಿ ನೀಡಿರುವ ಕುತೂಹಲಕಾರಿ ಅಂಶ ಪೊಲೀಸರ ಗಮನಕ್ಕೆ ಬಂದಿದೆ. ಹೀಗೆ ಸುಪಾರಿ ನೀಡಿರುವ ವ್ಯಕ್ತಿಯ ಬೆನ್ನು ಬಿದ್ದಿರುವ ಪೊಲೀಸರು ಆತನ ಬಂಧನಕ್ಕೆ ಯೋಜನೆ ರೂಪಿಸುವಷ್ಟರಲ್ಲಿ ಆತ ತೆಲಂಗಾಣದ ಮೂಲಕ ಪಶ್ಚಿಮ ಬಂಗಾಳಕ್ಕೆ ಕಾಲ್ಕಿತ್ತಿದ್ದಾನೆ ಎಂಬ ಅಂಶ ಸಹ ಬೆಳಕಿಗೆ ಬಂದಿದೆ.

ಈ ಎಲ್ಲ ಬೆಳವಣಿಗೆಗಳ ಮಧ್ಯೆ, ಪ್ರಕರಣದಲ್ಲಿ ಭಾಗಿಯಾಗಿರುವ ನಾಲ್ವರು ದರೋಡೆಕೋರರ ಜೊತೆ ಸಂಪರ್ಕದಲ್ಲಿದ್ದ ಹೈದರಾ ಬಾದ್ ಮೂಲದ ಇಬ್ಬರನ್ನು ವಶಕ್ಕೆ ಪಡೆದಿರುವ ಪೊಲೀಸರು ಅವರ ವಿಚಾರಣೆ ತೀವ್ರಗೊಳಿಸಿದ್ದಾರೆ. ಈ ಇಬ್ಬರೂ ದರೋ ಡೆಕೋರರು ಕಳ್ಳತನ ಮಾಡಿದ ಚಿನ್ನಾಭರಣಗಳನ್ನು ಮಾರಾಟ ಮಾಡುವ ಹೊಣೆಗಾರಿಕೆ ನಿಭಾಯಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

# ಸಚಿವರ ಕಾರ್ಯವೈಖರಿ ಮೌಲ್ಯಮಾಪನ

**ಬೆಂಗಳೂರು, ಜು. 14**– ರಾಜ್ಯ ಕಾಂಗ್ರೆಸ್ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಇಂದಿನಿಂದ ರಾಜ್ಯ ಸರ್ಕಾರದ ಸಚಿವ ರುಗಳ ಕಾರ್ಯವೈಖರಿಯ ಮೌಲ್ಯಮಾಪನಕ್ಕೆ ಮುಂದಾಗಿದ್ದು, ಸೋಮವಾರದಿಂದ ಮೂರು ದಿನಗಳ ಕಾಲ ಶಾಸಕರು ಹಾಗೂ ಸಚಿವರುಗಳ ಜತೆ ಸಭೆ ಮೂರನೇ ಸುತ್ತಿನ ಸಮಾಲೋಚನಾ ಸಭೆಯನ್ನು ಮುಂದುವರೆಸಿದ್ದಾರೆ.

ಕಳೆದ ಎರಡು ವಾರದಲ್ಲಿ 3 ದಿನಗಳ ಕಾಲ ರಾಜ್ಯದಲ್ಲೇ ಬೀಡು ಬಿಟ್ಟು ಕೈ ಶಾಸಕರ ಜತೆ ಪ್ರತ್ಯೇಕ ಸಭೆ ನಡೆಸಿದ್ದ ಸುರ್ಜೈವಾಲಾ ಅವರು ಇಂದಿನಿಂದ ಮತ್ತೆ ಮೂರು ದಿನಗಳ ಕಾಲ ಬಾಕಿ ಇರುವ ಶಾಸಕರು, ಎಲ್ಲ ಸಚಿವರು ಹಾಗೂ ಸಂಸದರ ಜತೆ ಪ್ರತ್ಯೇಕ ಸಭೆ ನಡೆಸುವರು.ಪ್ರದೇಶ ಕಾಂಗ್ರೆಸ್ ಕಚೇರಿಯಲ್ಲಿ ಮೂರು ದಿನಗಳ ಕಾಲ ಸಚಿವರುಗಳ ಜತೆ ಸಭೆ ನಡೆಸಲಿರುವ ಸುರ್ಜೇವಾಲಾ ಅವರು ಪ್ರತಿಯೊಬ್ಬರ ಸಚಿವರುಗಳ ಆಡಳಿತ ವೈಖರಿಯ ಪರಾಮರ್ಶೆ ಜತೆಗೆ ಅವರ ಇಲಾಖೆಗಳ ಪ್ರಗತಿಯ ವರದಿಯನ್ನು ಪಡೆಯುವರು.

ಸೋಮವಾರ ಮಧ್ಯಾಹ್ನದಿಂದಲೇ ಪ್ರದೇಶ ಕಾಂಗ್ರೆಸ್ ಕಚೇರಿಯಲ್ಲಿ ಶಾಸಕರು ಹಾಗೂ ಸಚಿವರ ಜತೆ ಸಭೆ ನಡೆಸಿರುವ ಸುರ್ಜೇವಾಲಾ ಅವರು ಸರ್ಕಾರದ ಆಡಳಿತ ವೈಖರಿ, ನಾಯಕತ್ವ ಎಲ್ಲದರ ಬಗ್ಗೆಯೂ ಅಭಿಪ್ರಾಯಗಳನ್ನು ಸಂಗ್ರಹಿಸಿದರು.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರು ಶಾಸಕರುಗಳ ಜತೆ ಸಭೆ ನಡೆಸಿ ನಾಯಕತ್ವಕ್ಕೆ ಸಂಬಂಧಿಸಿದಂತೆ ಅಭಿಪ್ರಾಯಗಳನ್ನು ಸಂಗ್ರಹಿಸುತ್ತಿದ್ದಾರೆ ಎಂದು ಕೆಲ ಶಾಸಕರುಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಳಿ ಅಸಮಾಧಾನ ಹೊರ ಹಾಕಿದ್ದರಾದರೂ ಇದ್ಯಾವುದನ್ನು ಲೆಕ್ಕಿಸದೆ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರು ಇಂದಿನಿಂದ ಮತ್ತೆ ಸಮಾಲೋಚನಾ ಸಭೆಗಳನ್ನು ಮುಂದುವರೆಸಿದ್ದಾರೆ. ಮೂರು ದಿನಗಳ ಕಾಲ ಎಲ್ಲ ಸಚಿವರು, ಸಂಸದರ ಜತೆ ಸಭೆ ನಡೆಸುವ ಸುರ್ಜೇವಾಲಾ ಅವರು ಜುಲೈ 16 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜತೆಯೂ ಅಂತಿಮ ಸಭೆ ನಡೆಸಿ, ಶಾಸಕರು ಹಾಗೂ ಸಚಿವರುಗಳ ಅಭಿಪ್ರಾಯಗಳನ್ನು ಅವರ ಗಮನಕ್ಕೆ ತರುವರು ಎಂದು



ಹೇಳಲಾಗಿದೆ.ಮೊದಲ ದಿನ 10 ಮಂದಿ ಸಚಿವರಿಗೆ ಸಮಯ ನಿಗದಿ ಮಾಡಲಾಗಿದ್ದು, ಪ್ರತಿಯೊಬ್ಬ ಸಚಿವರುಗಳಿಂದ ಅವರ ಇಲಾಖೆಯಲ್ಲಿ ಕೈಗೊಂಡಿರುವ ಯೋಜನೆಗಳು, ಸರ್ಕಾರದ ಕಾರ್ಯಕ್ರಮಗಳ ಅನುಷ್ಠಾನ ಎಲ್ಲದರ ಬಗ್ಗೆಯೂ ಮಾಹಿತಿಗಳನ್ನು ಪಡೆದುಕೊಂಡರು. ಜತೆಗೆ ಸರ್ಕಾರದ ಆಡಳಿತ ವೈಖರಿ ಬಗ್ಗೆಯೂ ಅಭಿಪ್ರಾಯವನ್ನು ಸಂಗ್ರಹಿಸಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರದ ಕೆಲ ಸಚಿವರುಗಳ ಕಾರ್ಯವೈಖರಿ ಹಾಗೂ ಶಾಸಕರುಗಳಿಗೆ ಸಚಿವರುಗಳು ಸ್ಪಂದಿಸದ ಬಗ್ಗೆ ಹಲವು ಶಾಸಕರು ಸುರ್ಜೇವಾಲಾ ಅವರಿಗೆ ದೂರಿಟ್ಟಿದ್ದರು.ಶಾಸಕರ ದೂರುಗಳನ್ನು ಆಲಿಸಿದ್ದ ಸುರ್ಜೇವಾಲಾ ಅವರು ಇಂದಿನಿಂದ ಸಚಿವರುಗಳ ಜತೆ ಸಭೆ ನಡೆಸಿ ಶಾಸಕರುಗಳ ಅಹವಾಲುಗಳನ್ನು ಗಮನಕ್ಕೆ ತರುವ ಜತೆಗೆ ಶಾಸಕರಿಗೆ ಸ್ಪಂದಿಸಿ, ಶಾಸಕರ ಕೆಲಸಗಳನ್ನು ಮಾಡಿಕೊಡುವಂತೆ ತಾಕೀತು ಮಾಡಿದರು.ಮುಂದಿನ ನವೆಂಬರ್‌ನಲ್ಲಿ ಸಚಿವ ಸಂಪುಟ ಪುನರ್ ರಚನೆಯಾಗಲಿದೆ ಎಂಬ ಸುದ್ದಿಗಳ ನಡುವೆಯೇ ಸುರ್ಜೇವಾಲಾ ಅವರು ಸಚಿವರುಗಳ ಜತೆ ಸಭೆ ನಡೆಸಿ ಅವರ ಇಲಾಖೆಯ ಪ್ರಗತಿ ವರದಿಯನ್ನು ಪಡೆದಿದ್ದು, ಪ್ರತಿ ಸಚಿವರುಗಳ ಆಡಳಿತದ ಮೌಲ್ಯಮಾಪನ ನಡೆಸಿ ವರದಿಯನ್ನು ಹೈಕಮಾಂಡ್‌ಗೆ ನೀಡಲಿದ್ದಾರೆ.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರ ಮೌಲ್ಯಮಾಪನ ಕೆಲ ಸಚಿವರಿಗೆ ನಡುಕ ತಂದಿರುವುದು ನಿಜ. ಸರಿಯಾದ ಅನುದಾನವೇ ಸಿಕ್ಕಿಲ್ಲ, ಹೀಗಿರುವಾಗ ಇಲಾಖೆಯಲ್ಲಿ ಒಳ್ಳೆಯ ಕೆಲಸ ಮಾಡಲು ಹೇಗೆ ಸಾಧ್ಯ ಎಂದು ಕೆಲ ಸಚಿವರುಗಳು ಸುರ್ಜೇವಾಲಾರವರ ಬಳಿ ತಮ್ಮ ಅಹವಾಲನ್ನು ಹೇಳುವರು ಎನ್ನಲಾಗಿದೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಕನ್ನಡ ಚಿತ್ರರಂಗದ ಮೊದಲ ಸೂಪರ್ ಸ್ಟಾರ್ ನಟಿ ಡಾ. ಸರೋಜಾದೇವಿ ಇನ್ನಿಲ್ಲ

**ಬೆಂಗಳೂರು, ಜು. 14–** ಕನ್ನಡ ಸಿನಿಮಾದ ಮೊದಲ ಸೂಪರ್ ಸ್ಟಾರ್ ನಟಿ ಎಂದೇ ಹೆಸರಾಗಿದ್ದ ಪಂಚಭಾಷಾ ತಾರೆ ಬಿ. ಸರೋಜಾದೇವಿ ಸೋಮವಾರ ನಿಧನರಾಗಿದ್ದಾರೆ. ನಾಳೆ ಚನ್ನಪಟ್ಟಣದ ದಶಾವರ ಗ್ರಾಮದಲ್ಲಿ ಸರೋಜಾದೇವಿಯವರ ಅಂತ್ಯಕ್ರಿಯೆ ನಡೆಯಲಿದೆ.

ವಯೋ ಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು ಇಂದು ಬೆಳಿಗ್ಗೆ ಬೆಂಗಳೂರಿನ ಮಲ್ಲೇಶ್ವರದಲ್ಲಿರುವ ತಮ್ಮ ಸ್ವಗೃಹದಲ್ಲಿ ಕೊನೆಯುಸಿರೆಳೆದಿದ್ದಾರೆ. ನಟಿ ಬಿ. ಸರೋಜಾದೇವಿ ಅವರಿಗೆ 87 ವರ್ಷ ವಯಸ್ಸಾಗಿತ್ತು. ಅವರಿಗೆ ಇಬ್ಬರು ಮಕ್ಕಳಿದ್ದಾರೆ.ಕಳೆದ ಕೆಲ ದಿನಗಳಿಂದ ಸರೋಜಾದೇವಿ ಅವರು ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದರು.

ನಿಧನರಾಗಿರುವ ನಟಿ ಬಿ. ಸರೋಜಾದೇವಿಯವರ ಪಾರ್ಥೀವ ಶರೀರವನ್ನು ಮಲ್ಲೇಶ್ವರದ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ಇಡಲಾಗಿದೆ.

ನಟಿ ಸರೋಜಾದೇವಿಯವರ ಪತಿ 1987 ರಲ್ಲಿ ನಿಧನರಾಗಿದ್ದು, ಅವರ ಸಮಾಧಿ ಪಕ್ಕದಲ್ಲೇ ಬಿ. ಸರೋಜಾ ದೇವಿಯವರ ಅಂತ್ಯಕ್ರಿಯೆ ನಡೆಸಲಾಗು ವುದು ಎಂದು ಅವರ ಕುಟುಂಬದವರು ತಿಳಿಸಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆಗೆ ಸೇರಿದ ಚನ್ನಪಟ್ಟಣ ತಾಲ್ಲೂಕಿನ ದಶಾವರ ಗ್ರಾಮದವರಾದ ಬಿ. ಸರೋಜಾದೇವಿಯವರು 1938ರ ಜನವರಿ 7 ರಂದು ಭೈರಪ್ಪ ಮತ್ತು ರುದ್ರಮ್ಮ ದಂಪತಿಗಳ ಪುತ್ರಿಯಾಗಿ ಜನಿಸಿದ್ದರು. ಇವರ ತಂದೆ ಭೈರಪ್ಪ ಅವರು ಪೊಲೀಸ್ ಅಧಿಕಾರಿಯಾಗಿದ್ದರು.

ನಟಿ ಸರೋಜಾದೇವಿಯವರು ತಮ್ಮ 17ನೇ ವಯಸ್ಸಿನಲ್ಲೇ ಚಿತ್ರರಂಗ ಪ್ರವೇಶಿಸಿ ಸುಮಾರು 6 ದಶಕಗಳ ಕಾಲ ಭಾರತೀಯ ಚಿತ್ರರಂಗದಲ್ಲಿ ಮಿನುಗಿದ್ದರು.

ನಟಿ ಸರೋಜಾದೇವಿಯವರು ಕನ್ನಡ, ತೆಲುಗು, ತಮಿಳು, ಹಿಂದಿ, ಮಲೆಯಾಳಂ ಸೇರಿದಂತೆ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದಾರೆ.

ಭಾರತೀಯ ಚಿತ್ರರಂಗದ ದಿಗ್ಗಜ ಕಲಾವಿದರುಗಳಾದ ಕನ್ನಡದ ವರನಟ ಡಾ. ರಾಜ್‌ಕುಮಾರ್, ಕಲ್ಯಾಣ್‌ಕುಮಾರ್, ಉದಯ್‌ಕುಮಾರ್ ಅವರ ಜತೆ ನಟಿಸಿದ್ದ ಸರೋಜಾದೇವಿಯವರು, ತೆಲುಗಿನಲ್ಲಿ ಖ್ಯಾತ ನಟರಾದ ಎ. ನಾಗೇಶ್ವರರಾವ್, ಎನ್.ಟಿ. ರಾಮರಾವ್ ಸೇರಿದಂತೆ ಹಲವು ಖ್ಯಾತ ನಟರೊಂದಿಗೆ ಅಭಿನಯಿಸಿದ್ದರು.

ತಮಿಳಿನಲ್ಲಿ ಶಿವಾಜಿ ಗಣೇಶನ್, ಜಮಿನಿ ಗಣೇಶನ್, ಎಂ.ಜಿ. ರಾಮಚಂದ್ರನ್ ಜತೆಯೂ ನಟಿಸಿದ್ದರು. ಹಿಂದಿಯಲ್ಲಿ ದಿಲೀಪ್ ಕುಮಾರ್, ರಾಜೇಂದ್ರಕುಮಾರ್, ಶಮೀಕಪೂರ್, ಸುನೀಲ್‌ದತ್ ಜತೆಗೆ ನಟಿಸಿ ಎಲ್ಲರ ಪ್ರೀತಿ, ಮೆಚ್ಚುಗೆಯನ್ನು ಗಳಿಸಿದ್ದರು.

2008 ರಲ್ಲಿ ಭಾರತದ 60ನೇ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಜೀವಮಾನ ಸಾಧನೆಗಾಗಿ ಸರೋಜಾದೇವಿಯವರಿಗೆ ಅಂದಿನ ರಾಷ್ಟ್ರಪತಿ ಪ್ರತಿಭಾ ಪಾಟೀಲ್ ಪ್ರಶಸ್ತಿ ನೀಡಿ ಗೌರವಿಸಿದ್ದರು.

2009 ರಲ್ಲಿ ರಾಜ್ಯ ಸರ್ಕಾರದಿಂದ ಡಾ. ರಾಜ್‌ಕುಮಾರ್ ಜೀವಮಾನ ಸಾಧನೆ ಪ್ರಶಸ್ತಿ, 2001 ರಲ್ಲಿ ಆಂಧ್ರ ಪ್ರದೇಶ ಸರ್ಕಾರದಿಂದ ಎನ್.ಟಿ.ಆರ್. ರಾಷ್ಟ್ರೀಯ ಪ್ರಶಸ್ತಿ ಹಾಗೂ 2009 ರಲ್ಲಿ ಮತ್ತ 2ನೇ ಬಾರಿಗೆ ಆಂಧ್ರ ಪ್ರದೇಶ ಸರ್ಕಾರದಿಂದ



ಎನ್.ಟಿ.ಆರ್. ರಾಷ್ಟ್ರೀಯ ಪ್ರಶಸ್ತಿಯನ್ನು ಪಡೆದಿದ್ದರು.

1993 ರಲ್ಲಿ ತಮಿಳುನಾಡು ಸರ್ಕಾರದ ಎಂ,ಜಿ.ಆರ್. ಪ್ರಶಸ್ತಿ, 1988 ರಲ್ಲಿ ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ, 1969ರಲ್ಲಿ ಕುಲವಿಳಕ್ಕು ಚಿತ್ರಕ್ಕೆ ಅತ್ಯುತ್ತಮ ನಟಿಯಾಗಿ ತಮಿಳುನಾಡು ರಾಜ್ಯ ಚಲನಚಿತ್ರ ಪ್ರಶಸ್ತಿ, 1965 ರಲ್ಲಿ ಕರ್ನಾಟಕದಿಂದ ಅಭಿನಯ ಸರಸ್ವತಿ ಗೌರವ, ಫಿಲ್ಮ್‌ಫೇರ್ ಪ್ರಶಸ್ತಿಗಳನ್ನು ಅವರು ಪಡೆದಿದ್ದರು.

2010ರಲ್ಲಿ ಭಾರತೀಯ ವಿದ್ಯಾಭವನ ಪದ್ಮಭೂಷಣ್ ಬಿ. ಸರೋಜಾದೇವಿ ರಾಷ್ಟ್ರೀಯ ಜೀವಮಾನ ಸಾಧನೆ ಪ್ರಶಸ್ತಿಯನ್ನು ಸ್ಥಾಪಿಸಿತ್ತು. ಈ ಪ್ರಶಸ್ತಿಗೆ ಕೆ.ಜೆ. ಯೇಸುದಾಸ್, ವೈ. ಜಯಂತಿಮಾಲಾ, ಅಂಜಲಿ ದೇವಿ, ಅಂಬರೀಷ್, ಜಯಂತಿ ಸೇರಿದಂತೆ ಹಲವು ಖ್ಯಾತ ನಟರು ಭಾಜನರಾಗಿದ್ದರು.

ನಟಿ ಬಿ. ಸರೋಜಾದೇವಿಯವರು 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಕಿತ್ತೂರುರಾಣಿ ಚೆಮ್ಮಮ್ಮ, ಭಕ್ತ ಕನಕದಾಸ, ಬಾಳೇಬಂಗಾರ, ನಾಗಕನ್ಯಾ, ಬೆಟ್ಟದ ಹೂವು, ಕಸ್ತೂರಿ ನಿವಾಸ, ಬಬ್ರುವಾಹನ, ಕಥಾಸಂಗಮ, ಅಮರಶಿಲ್ಪಿ ಚಕಣಚಾರಿ, ಮಲ್ಲಪ್ಪಮ್ಮನ ಪವಾಡ ಸೇರಿದಂತೆ ನೂರಾರು ಕನ್ನಡ ಚಿತ್ರಗಳಲ್ಲಿ ನಟಿಸಿದ್ದರು. ಜತೆಗೆ ತಮಿಳು, ತೆಲುಗು, ಹಿಂದಿ ಭಾಷೆಗಳಲ್ಲೂ ಹಲವು ಚಿತ್ರಗಳಲ್ಲೂ ನಟಿಸಿ ಚಿತ್ರ ಪ್ರೇಮಿಗಳ ಮನಗೆದಿದ್ದರು.

ಕನ್ನಡದ ಚಲನಚಿತ್ರ ಮಹಾಕವಿ ಕಾಳಿದಾಸ (1955) ಚಿತ್ರದಲ್ಲಿ ಅಭಿನಯಿಸಿದ್ದ ಬಿ. ಸರೋಜಾದೇವಿ ನಂತರ ಕನ್ನಡ ಸಿನಿಮಾ ಸೇರಿದಂತೆ ಭಾರತದ ಹಲವು ಭಾಷೆಗಳಲ್ಲಿ ನಟಿಸಿ ಜನರ ಪ್ರೀತಿ, ವಿಶ್ವಾಸ, ಗೌರವಕ್ಕೆ ಪಾತ್ರರಾಗಿದ್ದರು.

ಇತ್ತೀಚಿನ ಕೆಲ ವರ್ಷಗಳಿಂದ ನಟನೆಯಿಂದ ದೂರವಿದ್ದ ಅವರು, 2019 ರಲ್ಲಿ ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ರವರ ನಟಸಾರ್ವಭೌಮ ಚಿತ್ರದಲ್ಲಿ ಪೋಷಕ ಕಲಾವಿದೆಯಾಗಿ ನಟಿಸಿದ್ದರು. ಇದೇ ಇವರ ಕೊನೆಯ ಚಿತ್ರವಾಗಿತ್ತು.

ಪಂಚಭಾಷಾ ತಾರೆ ಬಿ. ಸರೋಜಾದೇವಿ ಅವರು ಕಿತ್ತೂರುರಾಣಿ ಚೆನ್ನಮ್ಮ ಚಿತ್ರದಲ್ಲಿ ರಾಣಿ ಚೆನ್ನಮ್ಮ ಪಾತ್ರದಲ್ಲಿ ಪರಾಕಾಯ ಪ್ರವೇಶ ಮಾಡಿ ನಟಿಸಿದ್ದು ಇಂದಿಗೂ ಆ ಪಾತ್ರ ಜನಮಾನಸದಲ್ಲಿ ಅಚ್ಚಳಿಯದಂತೆ ಉಳಿದಿದೆ.

ನಟ ವಿಷ್ಣುವರ್ಧನ್, ಅಂಬರೀಷ್, ಚಿರಂಜೀವಿ ಸೇರಿದಂತೆ ಹಲವು ಖ್ಯಾತ ನಟರ ಚಿತ್ರಗಳಲ್ಲಿಯೂ ಅವರು ನಟಿಸಿ ಹೆಸರಾಗಿದ್ದರು.

ಇಡೀ ಭಾರತೀಯ ಚಿತ್ರರಂಗಕ್ಕೆ ಮಾದರಿ ನಟಿಯಂತಿದ್ದ ಬಿ. ಸರೋಜಾದೇವಿಯವರ ಅಗಲಿಕೆ ಅವರ ಅಭಿಮಾನಿಗಳು, ಚಿತ್ರಪ್ರೇಮಿಗಳಲ್ಲಿ ನೋವು ತಂದಿದ್ದು, ಇಡೀ ಭಾರತೀಯ ಚಿತ್ರರಂಗವೇ ಇಂದು ದುಃಖ ಮಡುಗಟ್ಟಿದೆ.

ಪಂಚಭಾಷಾ ತಾರೆ ನಟಿ ಸರೋಜಾದೇವಿಯವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಹೆಚ್.ಡಿ. ಕುಮಾರಸ್ವಾಮಿ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಸೇರಿದಂತೆ ಹಲವು ರಾಜಕೀಯ ನಾಯಕರು, ಕನ್ನಡ ಚಿತ್ರರಂಗದ ಖ್ಯಾತ ನಟರುಗಳಾದ ಡಾ. ಶಿವರಾಜ್‌ಕುಮಾರ್, ರವಿಚಂದ್ರನ್, ದೊಡ್ಡಣ್ಣ, ಶ್ರೀನಿವಾಸಮೂರ್ತಿ, ಸುದೀಪ್, ಯಶ್ ಸೇರಿದಂತೆ ಹಲವು ಖ್ಯಾತ ನಟ–ನಟಿಯರು ಶೋಕ ವ್ಯಕ್ತಪಡಿಸಿದ್ದಾರೆ.

ಇಂದು ನಮ್ಮನ್ನು ಅಗಲಿರುವ ನಟಿ ಬಿ. ಸರೋಜಾದೇವಿಯವರನ್ನು ಅಭಿನಯ ಸರಸ್ವತಿ, ಕನ್ನಡದ ಗಿಳಿ, ಮೊದಲ ಮಹಿಳಾ ಸೂಪರ್ ಸ್ಟಾರ್ ಎಂಬ ಹೆಗ್ಗಳಿಕೆಯನ್ನು ಪಡೆದಿದ್ದರು.

1962ರಲ್ಲೇ ದೇಶದ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಶ್ರೀ, 1992 ರಲ್ಲಿ ಪದ್ಮಭೂಷಣ್ ಪ್ರಶಸ್ತಿಗಳು ಸಂದಿದ್ದವು. ಹಾಗೆಯೇ ಬೆಂಗಳೂರು ವಿಶ್ವವಿದ್ಯಾನಿಲಯದ ಗೌರವ ಡಾಕ್ಟರೇಟ್ ಮತ್ತು ತಮಿಳುನಾಡಿನ ಕಲೈಮಾಮಣಿ ಪ್ರಶಸ್ತಿಯನ್ನು ಪಡೆದಿದ್ದರು.

# ಭದ್ರ ಜಲಾಶಯದಿಂದ ನೀರು ಪೂರೈಕೆ ವಿರೋಧಿಸಿ ರೈತರ ಪ್ರತಿಭಟನೆ

**ಬೆಂಗಳೂರು, ಜು. 14–** ದಾವಣಗೆರೆ ಜಿಲ್ಲೆಯ ರೈತರ ಜೀವನಾಡಿಯಾಗಿರುವ ಭದ್ರಾ ಜಲಾಶಯದ ಬಲದಂಡೆ ನಾಲೆಯನ್ನು ಸೀಳಿ ಪಕ್ಕದ ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಅವೈಜ್ಞಾನಿಕ ಕಾಮಗಾರಿಯನ್ನು ವಿರೋಧಿಸಿ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ನೇತೃತ್ವದಲ್ಲಿ ರೈತ ಮುಖಂಡರುಗಳು ಬೆಂಗಳೂರಿನಲ್ಲಿಂದು ಪ್ರತಿಭಟನೆ ನಡೆಸಿದರು.

ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಮಾಜಿ ಸಚಿವ ರೇಣುಕಾಚಾರ್ಯ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನಾ ಧರಣಿಯಲ್ಲಿ ಮಾಜಿ ಶಾಸಕ ಬಸವರಾಜ ನಾಯಕ್, ಮುಖಂಡರಾದ ಮಾಡಾಳು ಮಲ್ಲಿಕಾರ್ಜುನ್, ಲೋಕಿಕೆರೆ ನಾಗರಾಜು, ಬಿ.ಜಿ. ಅಜಯ್‌ಕುಮಾರ್, ಚಂದ್ರಶೇಖರ ಪೂಜಾರಿ ಸೇರಿದಂತೆ ಹಲವು ರೈತ ಮುಖಂಡರುಗಳು ಭಾಗಿಯಾಗಿ ಭದ್ರಾ ಬಲದಂಡೆ ಕಾಲುವೆಯನ್ನು ಸೀಳಿ ನಡೆಸುತ್ತಿರುವ ಕಾಮಗಾರಿಯನ್ನು ಕೈ ಬಿಡಬೇಕು ಎಂದು ಆಗ್ರಹಿಸಿದರು.

ಭದ್ರಾ ಜಲಾಶಯದ ಬಲದಂಡೆ ನಾಲೆಯನ್ನು ಸೀಳಿ ಸರ್ಕಾರ ದಾವಣಗೆರೆ ಜಿಲ್ಲೆಯ ರೈತರಿಗೆ ಅನ್ಯಾಯ ಮಾಡುತ್ತಿದೆ.



ಈ ಕಾಮಗಾರಿ ಅವೈಜ್ಞಾನಿಕವಾಗಿದ್ದು, ಇದನ್ನು ಕೈ ಬಿಡುವಂತೆ ಆಗ್ರಹಿಸಿ ಹಲವು ಬಾರಿ ದಾವಣಗೆರೆ, ಶಿವಮೊಗ್ಗ ಭದ್ರಾ ಜಲಾಶಯಗಳಲ್ಲಿ ನಾವು ಪ್ರತಿಭಟನೆಗಳನ್ನು ಮಾಡಿದ್ದರೂ ಸರ್ಕಾರ ನಮ್ಮ ಸ್ಪಂದಿಸಿಲ್ಲ. ಈ ಕೂಡಲೇ ಈ ಕಾಮಗಾರಿಯನ್ನು ನಿಲ್ಲಿಸಬೇಕು ಎಂದು ಪ್ರತಿಭಟನಾನಿರತರು ಒತ್ತಾಯಿಸಿದರು.

ಭದ್ರಾ ಬಲದಂಡೆ ಸೀಳುವ ಕಾಮಗಾರಿಯನ್ನು ವಿರೋಧಿಸಿ ಸೋಮವಾರ ಬೆಳಿಗ್ಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತಾದರೂ ಪೊಲೀಸರು ನಮ್ಮ ರೈತರು ಮತ್ತು ಮುಖಂಡರುಗಳನ್ನು ಟೋಲ್‌ಗಳಲ್ಲೇ ತಡೆದು ಬಂಧಿಸುವ ಪ್ರಯತ್ನ ನಡೆಸಿದರು. ನನ್ನನ್ನೂ ನನ್ನ ನಿವಾಸದಲ್ಲೇ ಬಂಧಿಸುವ ಪ್ರಯತ್ನ ನಡೆಯಿತು ಎಂದು ರೇಣುಕಾಚಾರ್ಯ ದೂರಿದರು.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಿವಾಸಗಳ ಮುತ್ತಿಗೆಗೆ ಪೊಲೀಸರು ಅವಕಾಶ ನೀಡದ ಹಿನ್ನೆಲೆಯಲ್ಲಿ ಮಾಜಿ ಸಚಿವ ರೇಣುಚಾಕಾರ್ಯ ಅವರು ರೈತ ಮುಖಂಡರು ಹಾಗೂ ನೂರಾರು ಮಂದಿ ರೈತರೊಂದಿಗೆ ಸ್ವಾತಂತ್ರ್ಯ ಉದ್ಯಾನವನದಲ್ಲಿ ಧರಣಿ ನಡೆಸಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

# ಇಂಗ್ಲೀಷ್ ಮೇಷ್ಟ್ರಾದ ಸಚಿವ ಡಾ.ಶರಣಪ್ರಕಾಶ ಪಾಟೀಲ



**ಸೇಡಂ.ಜು.14–** ಸೇಡಂ ತಾಲೂಕಿನ ಮುಧೋಳ ಗ್ರಾಮದ ಇಂದಿರಾಗಾಂಧಿ ವಸತಿ ಶಾಲೆಗೆ ರವಿವಾರ ದಿಢೀರನೆ ಭೇಟಿ ನೀಡಿದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ದಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ವಸತಿ ಶಾಲೆಯ ಮಕ್ಕಳೊಂದಿಗೆ ಕೆಲ ಕಾಲ ಸಮಾಲೋಚನೆ ನಡೆಸಿದರು.

ವಸತಿ ಶಾಲೆಯ ವ್ಯವಸ್ಥೆ ಹಾಗೂ ಬೋಧನೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಪ್ರಶ್ನೆ ಕೇಳಿದ ಸಚಿವರು ದಿನನಿತ್ಯ ಬೆಳಿಗ್ಗೆ ದೈಹಿಕ ವ್ಯಾಯಾಮ ಜೊತೆಗೆ ದಿನಪತ್ರಿಕೆ ಓದುವ ಹವ್ಯಾಸವನ್ನು ರೂಢಿಸಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಭಾಷೆಯ ಹಿಡಿತ ಬಗ್ಗೆ ಪ್ರಶ್ನೆ ಕೇಳಿ, ತಾವು ತಿಳಿಸಿದ ಪದಗಳನ್ನು ಬೋರ್ಡ್ ಮೇಲೆ ಬರೆಯುವಂತೆ ಮಕ್ಕಳಿಗೆ ತಿಳಿಸಿ, ಕೆಲ ಸಮಯ ಇಂಗ್ಲಿಷ್ ಮೇಷ್ಟ್ರಾಗಿ ಬೋಧನೆ ಮಾಡಿದರು.ದಿನನಿತ್ಯ ಕನ್ನಡ, ಇಂಗ್ಲಿಷ್ ಪತ್ರಿಕೆಗಳು ಓದುವುದರಿಂದ ಭಾಷೆಯ ಮೇಲೆ ಹಿಡಿತ ಹಾಗೂ ವಾಕ್ಯ ರಚನೆ ಮಾಡಲು ಸಹಾಕಾರಿಯಾಗುತ್ತದೆ ಎಂದು ಸಚಿವರು ಸಲಹೆ ನೀಡಿದರು.ಸಹಾಯಕ ಆಯುಕ್ತ ಪ್ರಭುರೆಡ್ಡಿ, ತಹಶಿಲ್ದಾರ ಶ್ರೇಯಾಂಕ್, ವಸತಿ ಶಾಲೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಇದ್ದರು.

**ಮಕ್ಕಳಿಗೆ ಹೆಚ್ಚು ಸಮಯ ನೀಡಿ:**

ಇಂದಿರಾಗಾಂಧಿ ವಸತಿ ಶಾಲೆಯ ವಾರ್ಡನ್ (ಮೇಲ್ವಿಚಾರಕರು) ಪ್ರತಿನಿತ್ಯ ಮಕ್ಕಳ ದಿನಚರಿ ಬಗ್ಗೆ ನಿಗಾವಹಿಸಿ ವಿದ್ಯಾರ್ಥಿಗಳೊಂದಿಗೆ ಹೆಚ್ಚು ಸಮಯ ನೀಡಬೇಕೆಂದು ಸಚಿವರು ಶಾಲಾ ಸಿಬ್ಬಂದಿಗಳಿಗೆ ಹಾಗೂ ವಾರ್ಡನ್ ಗಳಿಗೆ ಸೂಚನೆ ನೀಡಿದರು.

**ಹಾಸ್ಟೆಲ್ ಸಮಸ್ಯೆ ಇದ್ದಲ್ಲಿ ಚೀಟಿ ಬರೆದು ಕೊಡಿ:**ಎಲ್ಲರ ಮುಂದೆ ಸಮಸ್ಯೆಗಳು, ವಂಯಕ್ತಿಕ ವಿಷಂಯಗಳ ಬಗ್ಗೆ ವಿದ್ಯಾರ್ಥಿನಿಯರು ಹೇಳಲು ಮುಜುಗರವಾದರೆ ನನಗೆ ನೇರವಾಗಿ ಕರೆ ಮಾಡಿ ಅಥವಾ ತಹಶಿಲ್ದಾರರಾದ ಶ್ರೇಯಾಂಕ್ ಅವರಿಗೆ ಚೀಟಿ ಬರೆದುಕೊಡಿ ಎಂದು ಸಚಿವರು ತಿಳಿಸಿದರು.

# ಶಕ್ತಿಯೋಜನೆ ಯಶಸ್ಸಿನ ಸಂಭ್ರಮಾಚರಣೆ, ಖುದ್ದು ಉಚಿತ ಟಿಕೆಟ್ ವಿತರಿಸಿದ ಸಿಎಂ

**ಬೆಂಗಳೂರು,ಜು.14–** ಶಕ್ತಿ ಯೋಜನೆ ಭರ್ಜರಿ ಯಶಸ್ಸನ್ನು ಕಾಂಗ್ರೆಸ್ ಪಕ್ಷ ನಾಡಿನಾದ್ಯಂತ ಸಂಭ್ರಮಿಸುತ್ತಿದ್ದು, ಸಿಎಂ ಸಿದ್ದರಾಮಯ್ಯ ಬಿಎಂಟಿಸಿ ಬಸ್‌ನಲ್ಲಿ ಶಕ್ತಿ ಯೋಜನೆಯ ಐದನೂರನೇ ಕೋಟಿ ಫಲಾನುಭವಿಗೆ ಖುದ್ದು ಉಚಿತ ಟಿಕೆಟ್ ವಿತರಿಸಿದರು. ಮುಖ್ಯಮಂತ್ರಿ ಅವರ ಅಧಿಕೃತ ನಿವಾಸ ಕಾವೇರಿಯ ಬಳಿ ಡಿಸಿಎಂ ಡಿ.ಕೆ.ಶಿವಕುಮಾರ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಸಚಿವರಾದ ಎಚ್.ಸಿ.ಮಹದೇವಪ್ಪ, ಎಂ.ಬಿ.ಪಾಟೀಲ್, ದಿನೇಶ್‌ಗುಂಡೂರಾವ್, ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ, ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಸೌಮ್ಯರೆಡ್ಡಿ ಅವರೊಂದಿಗೆ ಬಸ್ ಹತ್ತಿದ ಸಿದ್ದರಾಮಯ್ಯ ಶಕ್ತಿ ಯೋಜನೆಯ ಫಲಾನುಭವಿಗಳಿಗೆ ಟಿಕೆಟ್ ವಿತರಿಸಿದರು. ಶಕ್ತಿ ಯೋಜನೆಯ ಯಶಸ್ಸಿಗಾಗಿ ಬೆಂಗಳೂರಷ್ಟೆ ಅಲ್ಲ ರಾಜ್ಯಾದ್ಯಂತ ಮಹಿಳಾ ಪ್ರಯಾಣಿಕರನ್ನು ಸನಾನಿಸಲಾಗಿದೆ.

ಮುಖ್ಯಮಂತ್ರಿಯವರು 30 ಮಹಿಳೆ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಪ್ರಯಾಣಿಕರಿಗೆ ಇಳಕಲ್ ಸೀರೆ ವಿತರಿಸಿದರು. ಲತಾ ಎಂಬ ಪ್ರಯಾಣಿಕರಿಗೆ ಆನೆಯ ಕಲಾಕೃತಿಯನ್ನು ನೀಡಿ, ಶ್ರೀಗಂಧದ ಹಾರ ಹಾಕಿ ಸನಾನಿಸಿದರು. ಇದೇ ವೇಳೆ ರಾಜ್ಯಾದ್ಯಂತ ಸಿಹಿ ಹಂಚಿ



ಸಂಭ್ರಮಿಸಲಾಗಿದೆ.ಮುಖ್ಯಮಂತ್ರಿಯವರನ್ನು ಕಂಡು ಪುಳಕಿತರಾದ ಮಹಿಳೆಯರು ಹಸ್ತಲಾಘವ ನೀಡಿ ಸಂಭ್ರಮಿಸಿದರು.ಈ ವೇಳೆ ಮಹಿಳೆಯರನ್ನು ಸನಾನಿಸಲು ಸಿದ್ದರಾಮಯ್ಯನವರು ಡಿ.ಕೆ.ಶಿವಕುಮಾರ್ ಅವರನ್ನು ಜೊತೆಯಲ್ಲಿ ಕರೆದು ನಿಲ್ಲಿಸಿಕೊಂಡಿದ್ದು ವಿಶೇಷವಾಗಿತ್ತು.

ದೇಶದಲ್ಲೆ ಎಂದೂ ಇಲ್ಲದಂತಹ ಅಪರೂಪದ ಯೋಜನೆಗಳನ್ನು ಸಿದ್ದರಾಮಯ್ಯನವರ ಸರ್ಕಾರ ಜಾರಿಗೆ ತಂದಿದ್ದು, ಮಹಿಳೆಯರಿಗೆ ರಾಜ್ಯದಲ್ಲಿ ಚಾಮರಾಜನಗರದಿಂದ ಬೀದರ್‌ವರೆಗೂ, ಮಂಗಳೂರಿನಿಂದ ಕೋಲಾರದವರೆಗೂ ಯಾವ ಮೂಲೆಗಾದರೂ ಉಚಿತವಾಗಿ ಪ್ರಯಾಣಿಸುವ ಶಕ್ತಿ ಯೋಜನೆಯನ್ನು 2023 ರ ಜೂನ್11 ರಂದು ಜಾರಿಗೊಳಿಸಲಾಯಿತು. ಅಂದಿನಿಂದ ಇಲ್ಲಿವರೆಗೂ 500 ಕೋಟಿ ಬಸ್ ಟಿಕೆಟ್‌ಗಳನ್ನು ಉಚಿತವಾಗಿ ನೀಡಲಾಗಿದೆ. ಇದಕ್ಕಾಗಿ 12,699 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗಿದೆ.

ಐದನೂರನೇ ಕೋಟಿ ಟಿಕೆಟ್ ಫಲಾನುಭವಿ ಲತಾ ಅವರು ಮುಖ್ಯಮಂತ್ರಿಯವರಿಂದ ತಾವು ಸನಾನಕ್ಕಿಡಾಗಿದ್ದು, ಸಂತಸದ ಕ್ಷಣವಾಗಿದೆ. ಕೆಲಸ ಬಿಟ್ಟು ಬಂದಿದ್ದಕ್ಕೂ ಸಾರ್ಥಕವಾಯಿತು ಎಂದು ಸಂಭ್ರಮಿಸಿದರು.

ಇದು ನನ್ನ ಅದೃಷ್ಟ ಎಂದರು. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಸಾಕಷ್ಟು ಅನುಕೂಲವಾಗಿದೆ. ಈ ಮೊದಲು ಪ್ರಯಾಣಕ್ಕಾಗಿ ಸಾಕಷ್ಟು ಹಣ ಖರ್ಚಾಗುತ್ತಿತ್ತು. ಬಸ್ ಹಾಗೂ ಆಟೋದಲ್ಲಿ ಪ್ರಯಾಣಿಸಲು 5 ರಿಂದ 6 ಸಾವಿರ ರೂ. ಖರ್ಚಾಗುತ್ತಿತ್ತು. ಅದನ್ನು ಹಾಲು–ಹಣ್ಣಿನಂತಹ ಇತರ ವೆಚ್ಚಗಳಿಗೆ ಬಳಕೆ ಮಾಡುತ್ತಿದ್ದೇವೆ ಎಂದು ಲತಾ ಹೇಳಿದ್ದಾರೆ.

# ಗಡಿ ಭಾಗದ ಕನ್ನಡ ಶಾಲೆಗಳ ಅಭಿವೃದ್ಧಿಗೆ ಒತ್ತು

**ಔರಾದ್,ಜು.13–** ಗಡಿ ಭಾಗದ ಮಕ್ಕಳು ಶಿಕ್ಷಣದಲ್ಲಿ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಸ್ಪರ್ಧಾತ್ಮಕ ಯುಗದಲ್ಲಿ ಯಶಸ್ಸು ಸಾಧಿಸಬೇಕು ಎಂದು ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ನುಡಿದರು.

ತಾಲೂಕಿನ ನಾಗಮಾರಪಳ್ಳಿ ಪ್ರೌಢ ಶಾಲೆಗೆ 2024–25ನೇ ಸಾಲಿನಲ್ಲಿ ಮಂಜೂರಾದ ಸ್ಮಾರ್ಟ್ ಬೋರ್ಡ್ ಕಲಿಕೆಗೆ ಚಾಲನೆ ನೀಡಿ ಮಾತನಾಡಿದ ಅವರು, ಸರ್ಕಾರಿ ಕನ್ನಡ ಮಾಧ್ಯಮ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವು ಸೌಲಭ್ಯಗಳಿಂದ ವಂಚಿತರಾಗದಂತೆ ಯೋಜನೆ ರೂಪಿಸಲಾಗಿದ್ದು, ಕಳೆದ ವರ್ಷ ಗಡಿ ಭಾಗದ 65 ಶಾಲೆಗಳಿಗೆ ಸ್ಮಾರ್ಟ್ ಬೋರ್ಡ್ ವಿತರಿಸಲಾಗಿದೆ, ಗಡಿ ಭಾಗದ ಕನ್ನಡ ಶಾಲೆಗಳ ಅಭಿವೃದ್ಧಿಗೆ ಪ್ರಾಧಿಕಾರ ಒತ್ತು ನೀಡುತ್ತದೆ ಎಂದು ತಿಳಿಸಿದರು.ಮಹಾರಾಷ್ಟ್ರ ಮತ್ತು ತೆಲಂಗಾಣ ಗಡಿಯಲ್ಲಿರುವ ಔರಾದ್ ತಾಲೂಕಿನ ಸಮಸ್ಯೆಗಳ ಕುರಿತು ಮುಂಬರುವ ದಿನಗಳಲ್ಲಿ ಹಂತ ಹಂತವಾಗಿ ಕ್ರಿಯಾ ಯೋಜನೆ ರೂಪಿಸಿ ಪರಿಹಾರಕ್ಕೆ ಪ್ರಯತ್ನಿಸಲಾಗುವುದು ಎಂದರು.ತರಗತಿ ಕೋಣೆಯಲ್ಲಿ ಸ್ಮಾರ್ಟ್ ಬೋರ್ಡ್ ಬಳಕೆಯ ಕುರಿತು ಮಕ್ಕಳಿಂದ ಮಾಹಿತಿ ಪಡೆದಾಗ ಮಕ್ಕಳು, ಸಮಯದ ಸದುಪಯೋಗದ ಜೊತೆಗೆ ಪರಿಣಾಮಕಾರಿ ಕಲಿಕೆಗೆ ಅನುಕೂಲವಾಗಿದೆ. ಅಲ್ಲದೇ ಕ್ಲಿಷ್ಟಕರ ವಿಷಯಗಳು ಸರಳವಾಗಿ ಅರ್ಥೈಸಿಕೊಳ್ಳಲು ತುಂಬ ಸಹಕಾರಿಯಾಗಿದೆ ಎಂದು ಪ್ರತಿಕ್ರಿಯಿಸಿದರು.



ಈ ಸಂದರ್ಭದಲ್ಲಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಎಂ ಅಮರವಾಡಿ, ಪಿಡಿಓ ಶರಣಪ್ಪ ನಾಗಲಗಿದ್ದೆ, ಯುವ ಸಾಹಿತಿ ಲಕ್ಷ್ಮಣ ಮೇತ್ರೆ, ಶಾಲೆಯ ಮುಖ್ಯ ಶಿಕ್ಷಕ ತುಳಸಿರಾಮ ಬೇಂದ್ರೆ, ಎಡಿಎಂಸಿ ಅಧ್ಯಕ್ಷ ಪ್ರಕಾಶ ಹೆಬ್ಬಾಳೆ, ಶಿಕ್ಷಕರಾದ ಈಶ್ವರ ಕ್ಯಾದೆ, ಮಹಾನಂದಾ ಎಂಡೆ, ನಾಗನಾಥ ಸುರಂಗೆ, ಅಕ್ಕಮಹಾದೇವಿ, ಅನೀಲರೆಡ್ಡಿ, ಶಿವಕಾಂತ ಸೇರಿದಂತೆ ಗ್ರಾಪಂ ಸದಸ್ಯರು, ಎಡಿಎಂಸಿ ಸದಸ್ಯರು ಉಪಸ್ಥಿತರಿದ್ದರು.

ಯುವ ಮಾರ್ಗ

ಮಂಗಳವಾರ : 15–07–2025

# ಆರೋಪಿಗಳ ಬಂಧನ, ಸಿಪಿಐ ಕಾರ್ಯ ಶ್ಲಾಘನೀಯ

ಯುವ ಮಾರ್ಗ ಸುದ್ದಿ

**ಸಿರವಾರ, ಜು.14–**ತಾಲೂಕಿನ ಹರವಿ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಮೂರ್ತಿಗೆ ಜು.3ರಂದು ಕನ್ನಡಕ ಒಡೆದು ಹಾಕಿ ಅಪಮಾನ ಪ್ರಕರಣದ ಕುರಿತು ತನಿಖೆ ಕೈಗೊಂಡ ಸಿರವಾರ ಪೊಲೀಸರ ತಂಡ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ, ಆರೋಪಿಗಳಾದ ವೀರೇಶ ಗಣದಿನ್ನಿ, ಗಂಗಾಧರ ಇಬ್ಬರನ್ನು ಹಿಡಿದು, ನ್ಯಾಯಾಲಯಕ್ಕೆ ಒಪ್ಪಿಸಲಾಗಿದೆ.

ಸಿರವಾರ ಸಿಪಿಐ ಶಶಿಕಾಂತ ನೇತೃತ್ವದಲ್ಲಿ ತಂಡ ಕ್ಷಿಪ್ರಗತಿಯಲ್ಲಿ ಪ್ರಕರಣ ಬೇಧಿಸುವಲ್ಲಿ ಯಶಸ್ವಿಯಾಗಿ ನಿರ್ವಹಿಸಿದಕ್ಕೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು ಪ್ರಶಂಸಿಸಿದ್ದಾರೆ.

ಸ್ಥಳೀಯರ ಮೆಚ್ಚುಗೆ: ಪಟ್ಟಣದ ಟಿಪ್ಪು ಸುಲ್ತಾನ ಹಾಗೂ ಸಂಗೊಳ್ಳಿ ರಾಯಣ್ಣ ವೃತ್ತಕ್ಕೆ ಅಪಮಾನ ಮಾಡಿದ್ದು, ಹಾಗೂ ಬಸ್ ನಿಲ್ದಾಣ ಪಕ್ಕದ ಮಸ್ಜಿದ್ ಗೆ ಮದ್ಯಪಾನ ಮಾಡಿ ಬಾಟಲಿ ಒಡೆದ ಆರೋಪಿಗಳನ್ನು ಬಂಧಿಸಿದ್ದಾರೆ.

ಈಗ ಹರವಿ ಗ್ರಾಮದ ಅಂಬೇಡ್ಕರ್ ಮೂರ್ತಿಗೆ ಅಪಮಾನ ಮಾಡಿದವರನ್ನು ತ್ವರಿತವಾಗಿ ಬಂಧಿಸಿದ ಕಾರ್ಯವನ್ನು ಮುಸ್ಲಿಂ ಸಮಾಜದ ಮುಖಂಡ ಮಹ್ಮದ್ ಹುಸೇನ್ ಸಿಪಿಐ ಹಾಗೂ ಸಿಬ್ಬಂದಿ ವರ್ಗದ ಕಾರ್ಯ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಸಾರಿಗೆ ಸಚಿವರಿಂದ ಮಂತ್ರಾಲಯ ಪ್ರವಾಸ

**ರಾಯಚೂರು,ಜು.14–**ಸಾರಿಗೆ ಮತ್ತು ಮುಜರಾಯಿ ಸಚಿವರು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಜುಲೈ 15ರಂದು ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯಕ್ಕೆ ಪ್ರವಾಸ ಕೈಗೊಂಡಿದ್ದಾರೆ.

ಅವರು ಅಂದು ಬೆಳಿಗ್ಗೆ 6 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ ಬೆಳಿಗ್ಗೆ 11 ಗಂಟೆಗೆ ಕರ್ನೂಲ್ ಜಿಲ್ಲೆಯ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಭೇಟಿ ಹಾಗೂ ಶ್ರೀ ಗುರುಗಳ ದರ್ಶನ ಮಾಡಲಿದ್ದಾರೆ. ಇದೆ ವೇಳೆಯಲ್ಲಿ ಮಂತ್ರಾಲಯದ ಕರ್ನಾಟಕ ಛತ್ರದಲ್ಲಿ ಧಾರ್ಮಿಕ ದತ್ತಿ ಇಲಾಖೆಯಿಂದ ನಿರ್ಮಾಣ ಮಾಡಿರುವ ನೂತನ ಹಾಗೂ ಹಳೆ ಕಟ್ಟಡಗಳ ಪರಿಶೀಲನೆ ನಡೆಸಲಿದ್ದಾರೆ. ಜೊತೆಗೆ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯಿಂದ ನೂತನವಾಗಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಕಟ್ಟಡ ಕಾಮಗಾರಿಗಳ ಕುರಿತಂತೆ ಸಚಿವರು ಸಭೆ ಮತ್ತು ಪರಿಶೀಲನೆ ಮಾಡಲಿದ್ದಾರೆ ಎಂದು ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸೋದ್ಯಮ ಆಯುಕ್ತರಿಂದ ಮಂತ್ರಾಲಯ ಪ್ರವಾಸ

**ರಾಯಚೂರು,ಜು.14–**ಪ್ರವಾಸೋದ್ಯಮ ಇಲಾಖೆಯ ಆಯುಕ್ತರು ಹಾಗೂ ಕೆ.ಎಸ್.ಟಿ.ಡಿ.ಸಿಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ರಾಜೇಂದ್ರ ಕೆ.ವಿ. ಅವರು ಜುಲೈ 15ರಂದು ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯಕ್ಕೆ ಪ್ರವಾಸ ಕೈಗೊಂಡಿದ್ದಾರೆ.

ಜುಲೈ 15ರಂದು ಬೆಳಗ್ಗೆ ರೈಲು ಮಾರ್ಗವಾಗಿ ಮಂತ್ರಾಲಯಕ್ಕೆ ಆಗಮಿಸಲಿರುವ ಆಯುಕ್ತರು, ಬೆಳಿಗ್ಗೆ 10 ಗಂಟೆಗೆ ಸಾರಿಗೆ ಮತ್ತು ಮುಜುರಾಯಿ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ನಡೆಯುವ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಸ್ಥಳ ಪರಿಶೀಲನೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಸಭೆಯಲ್ಲಿ ಭಾಗಿಯಾಗಲಿದ್ದಾರೆ. ರಾತ್ರಿ 8 ಗಂಟೆಗೆ ಮಂತ್ರಾಲಯದಿಂದ ನಿರ್ಗಮಿಸಿ ರಸ್ತೆ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಮಾದಕ ದ್ರವ್ಯ ಸಾಗಣೆ ಆರೋಪ: ಲಿಂಗರಾಜ್ ಕಣ್ಣಿ ಬಂಧನ

**ಕಲಬುರಗಿ,ಜು.14–** ಮಾದಕ ದ್ರವ್ಯ ಸಾಗಣೆ ಮಾಡುತ್ತಿದ್ದ ಆರೋಪದ ಮೇರೆಗೆ ಕಲಬುರಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ ಕಣ್ಣಿ ಅವರನ್ನು ಮಹಾರಾಷ್ಟ್ರದ ಕಲ್ಯಾಣ ಪೊಲೀಸರು ಬಂಧಿಸಿದ್ದಾರೆ.

ಥಾಣೆ ನಗರದಲ್ಲಿ ಮಾದಕ ದ್ರವ್ಯ ಎಂದು ಪರಿಗಣಿಸಲಾಗಿರುವ ನಿಷೇಧಿತ120 ಕೊಡೆನ್ಸೈನ್ ಸಿರಪ್ ಮಾರಾಟ ಮಾಡುತ್ತಿದ್ದರು ಎಂದು ಹೇಳಲಾಗಿದ್ದು, ಇದೇ ವೇಳೆ ಪೊಲೀಸರು ಕಣ್ಣಿ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ನಿಷೇಧಿತ ಮಾದಕ ದ್ರವ್ಯ ಹೊಂದಿರುವ ಆರೋಪದ ಹಿನ್ನೆಲೆಯಲ್ಲಿ ಎನ್‌ಡಿಪಿಎಸ್ ಕಾಯಿದೆ ಅಡಿ ಕಲ್ಯಾಣ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ವಿಚಾರಣೆ ಮುಂದುವರೆದಿದೆ.ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿ–ಬಿಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕಲಬುರಗಿ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ಪರಮಾಪ್ತರೂ ಆಗಿರುವ ಕಣ್ಣಿ ಬಂಧನದಿಂದಾಗಿ ಇದೀಗ ಜಿಲ್ಲಾ ಕಾಂಗ್ರೆಸ್ ವಲಯದಲ್ಲಿ ಸಂಚಲನ ಸೃಷ್ಟಿಸಿದೆ.

# ಒಳಚರಂಡಿ ನಿರ್ಮಾಣ ಕಾಮಗಾರಿಗೆಆಡಳಿತಾತ್ಮಕ ಅನುಮೋದನೆ: ಜಿಲ್ಲಾಧಿಕಾರಿ ನಿತೀಶ್ ಕೆ.

ಯುವ ಮಾರ್ಗ ಸುದ್ದಿ



**ರಾಯಚೂರು,ಜು.14–** ರಾಯಚೂರು ಮಹಾನಗರದ ವ್ಯಾಪ್ತಿಯ ತಗ್ಗು ಪ್ರದೇಶಗಳ ಮಳೆ ನೀರು ಒಳಚರಂಡಿ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಲೋಕೋಪಯೋಗಿ ಇಲಾಖೆ, ರಾಯಚೂರು ವಿಭಾಗದಿಂದ ಟೆಂಡರ್ ಸಹ ಕರೆಯಲಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ರಾಯಚೂರು ಮಹಾನಗರದ ವ್ಯಾಪ್ತಿಯಲ್ಲಿ ಹೆಚ್ಚು ಮಳೆ ಯಾದಲ್ಲಿ ಚರಂಡಿಯ ಕೊರತೆಯಿಂದ ಪ್ರತಿಕೂಲ ಪ್ರವಾಹಗಳು ಮತ್ತು ಅತಿ ಹೆಚ್ಚು ನಷ್ಟಗಳು ಉಂಟಾಗುತ್ತದೆ. ಈ ಪ್ರವಾಹದಿಂದ ಆರ್ಥಿಕ, ಸಾಮಾಜಿಕ, ಆರೋಗ್ಯ ಹಾಗೂ ಪರಿಸರದ ಮೇಲೆ ಅನೇಕ ರೀತಿಯ ಪ್ರತಿಕೂಲ ಪರಿಣಾಮಗಳು ಉಂಟಾಗುತ್ತದೆ.

ಬಹಳ ವರ್ಷಗಳಿಂದ ರಾಯಚೂರು ಮಹಾನಗರದ ವ್ಯಾಪ್ತಿಯ ತಗ್ಗು ಪ್ರದೇಶದ ಏರಿಯಾಗಳಲ್ಲಿ ಮಳೆಗಾಲದ ಸಂದರ್ಭದಲ್ಲಿ ಹೆಚ್ಚು ಮಳೆಯಾದಲ್ಲಿ ನಾಗರಿಕರು ವಾಸಿಸುವ ಮನೆಗಳಗೆ ಮಳೆ ನೀರು ನುಗ್ಗಿ ಅಪಾರ ಪ್ರಮಾಣದ ನಷ್ಟ ಉಂಟಾಗುತ್ತದೆ. ಈ ಸಮಸ್ಯೆಯನ್ನು ಬಗೆಹರಿಸಿ ಶಾಶ್ವತ ಪರಿಹಾರ ಕಂಡುಕೊಳ್ಳವುದು ಅತಿ ಅವಶ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ರಾಜ್ಯ ವಿಪತ್ತು ಉಪ ಶಮನ ನಿಧಿಯ ಮಾರ್ಗಸೂಚಿಗಳನ್ವಯ ರಾಯಚೂರು ಮಹಾನಗರ ವ್ಯಾ ಪ್ತಿಯ ತಗ್ಗು ಪ್ರದೇಶಗಳ ಮಳೆ ನೀರು ಒಳಚರಂಡಿ ನಿರ್ಮಾಣ ರೂ. 16.61 ಕೋಟಿಗಳ ಕಾಮ ಗಾರಿಗಳನ್ನು ಲೋಕೋಪಯೋಗಿ ಇಲಾಖೆ, ರಾಯಚೂರು ವಿಭಾಗದ ಮುಖಾಂತರ ಕೈಗೊಳ್ಳಲು ಮಾನ್ಯ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದರಂತೆ ಮಾನ್ಯ ಸರಕಾರದಿಂದ ಈ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಲೋಕೋಪಯೋಗಿ ಇಲಾಖೆಯಿಂದ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ ಎಂದು ತಿಳಿಸಿದರು.

# ನಗರದ ಪ್ರತಿವಾರ್ಡಿನಲ್ಲೂ ಯೋಗ ಕೇಂದ್ರ



**ಬಳ್ಳಾರಿ, ಜು.14–** ಜಿಲ್ಲಾ ಪತಂಜಲಿ ಯೋಗ ಸಮಿತಿ ಆಶ್ರಯದಲ್ಲಿ ಬಸವೇಶ್ವರ ಯೋಗ ಕೇಂದ್ರದಿಂದ ನಗರದ ವುಂಕಿ ಮರಿಸಿದ್ದಮ್ಮ ಶಾಲೆಯ ಆವರಣದಲ್ಲಿ ಗುರುವಂದನಾ ಮತ್ತು ಯೋಗ ಶಿಕ್ಷಕರಿಗೆ ಅಭಿನಂದನಾ ಕಾರ್ಯಕ್ರಮ ಕನ್ನಡ ಚೈತನ್ಯ ವೇದಿಕೆ ಸಹಯೋಗದೊಂದಿಗೆ ನಿನ್ನೆ ಆಯೋಜಿಸಿತ್ತು.

ಕನ್ನಡ ಚೈತನ್ಯ ವೇದಿಕೆಯ ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ಪ್ರಕಾಶ್ ಉದ್ಘಾಟಿಸಿ, ಆದ್ಯಾತ್ಮಿಕ ಗುರುಗಳು ಅಂಧಾಕಾರದ ಕತ್ತಲಿನಿಂದ ಬೆಳಕನ್ನು ಕೊಟ್ಟು ಜ್ಞಾನವನ್ನು ನೀಡುತ್ತಾರೆಂದರು. ಪಾಲಿಕೆ ಸದಸ್ಯೆ ಸುರೇಖ ಮಲ್ಲನಗೌಡ, ಯೋಗದಿಂದ ರೋಗಮುಕ್ತ ಸಮಾಜವಾಗುತ್ತದೆ ಆದರ ಜೊತೆಗೆ ಗುರುಗಳು ಹೇಳುವ ಆಧ್ಯಾತ್ಮಿಕದಿಂದ ತಾಳ್ಮೆ ಮತ್ತು ಜ್ಞಾನ ಬೆಳಗುತ್ತದೆಂದರು.

ಆಯುಷ ಜಿಲ್ಲಾಧಿಕಾರಿ ವಿರುಪಾಕ್ಷಪ್ಪ, ಆರ್ಯುವೇದ ಮತ್ತು ಯೋಗ ಒಂದೆ ನಾಣ್ಯದ ಎರಡು ಮುಖಗಳು ಎಂದರು.

ಅಧ್ಯಕ್ಷತೆವಹಿಸಿದ್ದ ವತಂಜಲಿ ಜಿಲ್ಲಾ ಅಧ್ಯಕ್ಷ ಪೊಂಪನಗೌಡ ಮಾತನಾಡಿ, ಮುಂದಿನ ದಿನಗಳಲ್ಲಿ ಪ್ರತಿಯೊಂದು ವಾರ್ಡಗಳಲ್ಲಿ ಯೋಗ ಕೇಂದ್ರ ಸ್ಥಾಪನೆ ಮಾಡುತ್ತೇವೆಂದರು. ರಾಜ್ಯ ಸಮಿತಿ ಸದಸ್ಯ ಇಸ್ವಿ ಪಂಪಾಪತಿ ಯೋಗ ಶಿಕ್ಷಕರು ಮತ್ತು ಸಾಧಕರು ಜೂನ್ 21 ರಂದು 51 ಶಿಬಿರಗಳು ಮಾಡಿದ ಮಾಹಿತಿ ನೀಡಿ ಇಡಿ ಕರ್ನಾಟಕದಲ್ಲಿ ಹೆಚ್ಚಿನ ಶಿಬಿರವನ್ನು ಮಾಡಿ ನಮ್ಮ ಪತಂಜಲಿ ಸಮಿತಿ ಮುಂಚುಣಿಯಲ್ಲಿದೆಂದರು.

# ಶಾಸಕರಿಂದ ತಾಯಮ್ಮ ಕುಟುಂಬಕ್ಕೆ 5 ಲಕ್ಷ ರೂ. ಎನ್‌ಡಿಆರ್‌ಎಫ್ ಪರಿಹಾರ ವಿತರಣೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.14–**ಹಿರೇಕೊಟ್ನೇಕಲ್ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಕಾತರಕಿ ಗ್ರಾಮದಲ್ಲಿ ಇತ್ತೀಚೆಗೆ ಮನೆಯ ಗೋಡೆ ಕುಸಿದು ಮೃತಪಟ್ಟ ತಾಯಮ್ಮ ಅವರ ಕುಟುಂಬಕ್ಕೆ ಶಾಸಕ ಜಿ.ಹಂಪಯ್ಯ ನಾಯಕ್ ಸಾಹುಕಾರ್ ಅವರು ಸೋಮವಾರ ಭೇಟಿ ನೀಡಿ, ಸರ್ಕಾರದ ವತಿಯಿಂದ ಬರುವ ರೂ.5 ಲಕ್ಷ ಮೊತ್ತದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (ಎನ್‌ಡಿಆರ್‌ಎಫ್) ಚೆಕ್ ಅನ್ನು ಹಸ್ತಾಂತರಿಸಿದರು.

ಇದೇ ವೇಳೆ, ಶವ ಸಂಸ್ಕಾರಕ್ಕಾಗಿ ನೀಡಲಾಗುವ ರೂ.25,000 ಮೊತ್ತದ ಚೆಕ್ ಅನ್ನು ಆದಷ್ಟು ಬೇಗ ಕಂದಾಯ ಇಲಾಖೆಯಿಂದ ಕುಟುಂಬಸ್ಥರಿಗೆ ತಲುಪಿಸುವಂತೆ ಸ್ಥಳದಲ್ಲಿದ್ದ ತಹಸೀಲ್ದಾರ್ ಅವರಿಗೆ ಶಾಸಕರು ಸೂಚನೆ ನೀಡಿದರು.



ಈ ಸಂದರ್ಭದಲ್ಲಿ ತಹಸೀಲ್ದಾರ್ ಭೀಮರಾಯ ರಾಮಸಮುದ್ರ, ಪಂಚ ಗ್ಯಾರಂಟಿ ಅಧ್ಯಕ್ಷ ಬಿ.ಕೆ. ಅಂಬರೇಶಪ್ಪ ವಕೀಲರು, ನರಸಿಂಹ ಕಾತರಕಿ, ಪಿಎಲ್‌ಡಿ ಬ್ಯಾಂಕಿನ ಮಾಜಿ ಅಧ್ಯಕ್ಷ ಜಲಾಲ್ ಸಾಬ್, ರಮೇಶ್ ಹೂಗಾರ್, ಪಂಚಾಯತ್ ಸದಸ್ಯರು, ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಔರದ್:ಗಡಿ ಭಾಗದಲ್ಲಿ ಕನ್ನಡದ ಸ್ಥಿತಿಗತಿ ಕುರಿತು ಚರ್ಚೆ

**ಔರಾದ್,ಜು.14–** ಔರಾದ್ ಮತ್ತು ಕಮಲನಗರ ತಾಲೂಕಿನ ಕನ್ನಡ ಶಾಲೆಗಳಿಲ್ಲದ ಗ್ರಾಮಗಳಲ್ಲಿ ಪ್ರಸಕ್ತ ವರ್ಷದಿಂದ ಕನ್ನಡ ಶಾಲೆಗಳು ಆರಂಭಿಸುವಂತೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳು ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಕನ್ನಡ ಭವನದಲ್ಲಿ ಗಡಿ ಭಾಗದಲ್ಲಿ ಕನ್ನಡದ ಸ್ಥಿತಿಗತಿ ಕುರಿತು ಚರ್ಚಿಸಲು ಆಯೋಜಿಸಿರುವ ಸಮಾಲೋಚನಾ ಸಭೆಯಲ್ಲಿ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ, ಪ್ರಸ್ತುತ ತಮ್ಮ ಮಕ್ಕಳಿಗೆ ಕನ್ನಡ ಮಾಧ್ಯಮದಲ್ಲಿ ಕಲಿಸಲು ಗಡಿ ಭಾಗದ ಪಾಲಕರು ಉತ್ಸುಕರಾಗಿದ್ದು, ಆ ಗಡಿ ಜನರ ಭಾವನೆಗಳಿಗೆ ನಾವುಗಳು ಸ್ಪಂದಿಸಬೇಕಿದೆ.ಗಡಿ ಭಾಗದ ಸುಮಾರು 23ಕ್ಕೂ ಅಧಿಕ ಗ್ರಾಮಗಳಲ್ಲಿ ಕನ್ನಡ ಶಾಲೆಗಳೇ ಇಲ್ಲ. ಈ ಕಾರಣ ಅನೇಕ ಪಾಲಕ ಪೋಷಕರು ತಮ್ಮ ಮಕ್ಕಳಿಗೆ ಅನಿವಾರ್ಯವಾಗಿ ಔರಾದ್ ಪಟ್ಟಣದ ಖಾಸಗಿ ಶಾಲೆಗಳಿಗೆ




ಕಳುಹಿಸುತ್ತಿರುವುದು ಸಾಮಾನ್ಯ. ಕನ್ನಡ ಮಾಧ್ಯಮದ ಸರ್ಕಾರಿ ಶಾಲೆಗಳು ತೆರೆದರೆ ಗಡಿಭಾಗದ ಜನರಿಗೆ ನ್ಯಾಯ ದೊರೆಯುತ್ತದೆ.

ಔರಾದ್ ಪಟ್ಟಣದಲ್ಲಿ ಕನಿಷ್ಠ 500 ಜನ ಸೇರುವಂತಹ ಒಂದು ಸುಸಜ್ಜಿತ ಸಾಂಸ್ಕೃತಿಕ ಭವನ ನಿರ್ಮಾಣ, ಕನ್ನಡ ಭವನಕ್ಕೆ ಮೂಲಭೂತ ಸೌಲಭ್ಯಗಳ ಒದಗಿಸುವಿಕೆ, ಗಡಿ ಸಮಾವೇಶಗಳ ಆಯೋಜನೆಗೆ ಅಗತ್ಯ ಅನುದಾನ ನೀಡುವಂತೆ ಪ್ರಾಧಿಕಾರದ ಅಧ್ಯಕ್ಷರಲ್ಲಿ ವಿನಂತಿಸಿದರು.

# ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು,ಜು.14–**ಇಲ್ಲಿನ ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದಿಂದ 2025–26ನೇ ಸಾಲಿನಲ್ಲಿ ಆತ್ಮ ಯೋಜನೆಯಡಿ ರಾಯಚೂರು ತಾಲೂಕಿನ ಯರಗೇರಾ ಹೋಬಳಿಯಲ್ಲಿ ಖಾಲಿ ಇರುವ ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಯು ಕೃಷಿ ವಿಜ್ಞಾನದಲ್ಲಿ ಪದವಿ ಹಾಗೂ ಕೃಷಿ ಕ್ಷೇತ್ರಗಳಲ್ಲಿ ಕನಿಷ್ಠ 1 ವರ್ಷಗಳ ಅನುಭವ ಹೊಂದಿರಬೇಕು. ಅಭ್ಯರ್ಥಿಗಳು ಛಾಯಾಚಿತ್ರ ಲಗತ್ತಿಸಿದ ವೈಯಕ್ತಿಕ ಮಾಹಿತಿ, ವಿದ್ಯಾರ್ಹತೆ, ಅನುಭವ ಪ್ರಮಾಣ ಪತ್ರ, ಆಧಾರ್ ಪ್ರತಿ, ಕಂಪ್ಯೂಟರ್, ಜಾತಿ ಪ್ರಮಾಣ ಪತ್ರದ ದೃಢೀಕೃತ ಫೋಟೋ ಪ್ರತಿ ದಾಖಲಾತಿಗಳನ್ನು ಜುಲೈ 18ರ ಸಂಜೆ 4 ಗಂಟೆಯೊಳಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಜಿಲ್ಲಾ ನ್ಯಾಯಲಯ ಕಟ್ಟಡ ಬಲಗಡೆ, ಹೈದ್ರಾಬಾದ್ ರಸ್ತೆ, ರಾಯಚೂರು ಇವರ ಕಚೇರಿಗೆ ಅಂಚೆ ಮುಖಾಂತರ ಅಥವಾ ಖುದ್ದಾಗಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 90 ದಿನಗಳು ದೇಶಕ್ಕಾಗಿ ಘೋಷವ್ಯಾಕದಡಿ ವಿಶೇಷ ಅಭಿಯಾನ

**ರಾಯಚೂರು,ಜು.14–**ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ದೇಶದ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಮಧ್ಯಸ್ಥಿಕೆ ಮೂಲಕ ರಾಜಿ ಆಗಬಹುದಾದ ಪ್ರಕರಣಗಳ ಕುರಿತು 90 ದಿನಗಳು ದೇಶಕ್ಕಾಗಿ ಎಂಬ ಘೋಷವ್ಯಾಕದೊಂದಿಗೆ ವಿಶೇಷ ಮಧ್ಯಸ್ಥಿಕೆಯ ಅಭಿಯಾನ ಆಯೋಜಿಸಲಾಗಿದೆ.

ಈ ಮಧ್ಯಸ್ಥಿಕೆಯ ಅಭಿಯಾನವು ರಾಯಚೂರ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಸಹ ನಡೆಯಲಿದೆ. ರಾಜಿ ಆಗಬಹುದಾದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳುಹಿಸಿ ಅಲ್ಲಿ ವಿಶೇಷ ತರಬೇತಿ ಹೊಂದಿದ ಮಧ್ಯಸ್ಥಿಕೆಗಾರರಿಂದ ರಾಜಿಸಂಧಾನ ಮಾಡಿಸುವ ವ್ಯವಸ್ಥೆ ಇದಾಗಿದೆ. ಕಕ್ಷಿದಾರರು ಈ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಮಾಹಿತಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಸಿಂಧನೂರು, ಲಿಂಗಸೂಗೂರು, ಮಾನವಿ, ದೇವದುರ್ಗ ಕಚೇರಿಗಳನ್ನು ಸಂಪರ್ಕಿಸಬಹುದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಎ. ಸಾತ್ವಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಖಾಲಿ ಹುದ್ದೆಗಳ ನೇಮಕಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜು.14–** ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದಲ್ಲಿ ಗುತ್ತಿಗೆ ಆಧಾರದ ಮೇಲೆ ಹುದ್ದೆಗಳ ನೇಮಕಾತಿ ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಲಿಂಗಸೂಗೂರು ತಾಲೂಕಿನಲ್ಲಿ ಮಾನಸಿಕ ಆರೋಗ್ಯ ಕಾರ್ಯಕ್ರಮಕ್ಕೆ ಮನೋವೈದ್ಯರು–01 ಹುದ್ದೆಗೆ ವೈದ್ಯಕೀಯ ಪದವೀಧರರು ಎಂ.ಬಿ.ಬಿ.ಎಸ್ ಮತ್ತು ಎಮ್.ಸಿ.ಐ ನಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ಮನೋವೈದ್ಯಶಾಸ್ತ್ರದಲ್ಲಿ ಎಂ.ಡಿ ಅಥವಾ ಡಿ.ಪಿ.ಎಮ್ ಪದವಿ ಹೊಂದಿರಬೇಕು. ಕಮ್ಯೂನಿಟಿ ನರ್ಸ್ –01 ಹುದ್ದೆಗೆ ಕರ್ನಾಟಕ ನರ್ಸಿಂಗ್ ಕೌನ್ಸಿಲ್ ಆಫ್ ಇಂಡಿಯಾದಿಂದ ಮಾನ್ಯತೆ ಪಡೆದ ಸಂಸ್ಥೆಯಿಂದ ನರ್ಸಿಂಗ್‌ನಲ್ಲಿ ಬಿ.ಎಸ್.ಸಿ ನರ್ಸಿಂಗ್ ಪದವಿ (ಮೊದಲ ಅಧ್ಯತೆ) ಅಥವಾ ಜನರಲ್ ನರ್ಸಿಂಗ್ (ಜಿ.ಎನ್.ಎಮ್) ಪದವಿ ಪಡೆದಿರಬೇಕು. ಆಪ್ತಸಮಾಲೋಚಕರು–01 ಹುದ್ದೆಗೆ ಸಮಾಜ ಸೇವಕರ ಸ್ನಾತಕೋತ್ತರ ಪದವಿ (ಎಂ.ಎಸ್.ಡಬ್ಲೂ) ಪಡೆದಿರಬೇಕು. ಹಾಗೂ ಆಪ್ತಸಮಾಲೋಚಕರು ಒಂದು ಹುದ್ದೆಗೆ ಗೌರವಧನದ ಪ್ರಕಾರ ಸ್ವ–ಹಸ್ತಾಕ್ಷರದಿಂದ ಅರ್ಜಿಯನ್ನು ಭರ್ತಿಮಾಡಿ ಹಾಗೂ ಹುದ್ದೆಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳೊಂದಿಗೆ ಎರಡು ಭಾವಚಿತ್ರದೊಂದಿಗೆ ಜುಲೈ 22ರ ಸಂಜೆ 5 ಗಂಟೆಯೊಳಗಾಗಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8151896578ಗೆ ಸಂಪರ್ಕಿಸುವಂತೆ ಅಥವಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಲಯ ವಿಭಾಗವನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H